ಸಂಪುಟ 01 | ಸಂಚಿಕೆ 235 ಶುಕ್ರವಾರ 30 ಅಕ್ಟೋಬರ್ 2026 | ಪುಟ 4 | ಬೆಲೆ-2 ರೂ.

Posting registration number : RCR/RNP/116/2026-2028

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1) ವಿಶ್ವ ಪ್ರಾಣಿ ದಿನ (World Animal Day) ಪ್ರಾಣಿಗಳ ಹಕ್ಕುಗಳು, ಕಲ್ಯಾಣ ಮತ್ತು ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸಲು ಪ್ರತಿ ವರ್ಷ ಅಕ್ಟೋಬರ್ 4ರಂದು ವಿಶ್ವ ಪ್ರಾಣಿ ದಿನವನ್ನು ಆಚರಿಸಲಾಗುತ್ತದೆ.

2)ವಿಶ್ವ ಬಾಹ್ಯಾಕಾಶ ಸಪ್ತಾಹದ ಆರಂಭ (World Space Week) ಪ್ರತಿ ವರ್ಷ ಅಕ್ಟೋಬರ್ 4ರಿಂದ 10ರವರೆಗೆ ವಿಶ್ವ ಬಾಹ್ಯಾಕಾಶ ಸಪ್ತಾಹವನ್ನು ಆಚರಿಸಲಾಗುತ್ತದೆ. ಬಾಹ್ಯಾಕಾಶ ವಿಜ್ಞಾನ ಮತ್ತು ತಂತ್ರಜ್ಞಾನದ ಮಹತ್ವವನ್ನು ತಿಳಿಸುವುದು ಇದರ ಉದ್ದೇಶ.

3) ವಿಶ್ವ ಕಮ್ಯುನಿಯನ್ ಭಾನುವಾರ (World Communion Sunday) ಕ್ರೈಸ್ತ ಧರ್ಮದ ವಿವಿಧ ಪಂಗಡಗಳ ನಡುವೆ ಏಕತೆ ಮತ್ತು ಸಹೋದರತ್ವವನ್ನು ಉತ್ತೇಜಿಸುವ ದಿನ. 2026ರಲ್ಲಿ ಇದು ಅಕ್ಟೋಬರ್ 4ರಂದು ಬರುತ್ತದೆ.

ಸುಭಾಷಿತ

ಮನುಷ್ಯನಲ್ಲಿರುವ ಪರಿಪೂರ್ಣತೆಯನ್ನು ಹಿಗ್ಗಿಸುವುದೇ ನಿಜವಾದ ಶಿಕ್ಷಣ.

-ಸ್ವಾಮಿ ವಿವೇಕಾನಂದ

ದೋಸ್ತಿಗಳಲ್ಲಿ ಹೊಸ ಉತ್ಸಾಹದ ಸಂಚಲನ ಮೂಡಿಸಿದ ಪರಿಷತ್ ಚುನಾವಣಾ ಫಲಿತಾಂಶ

❏ ನೈಜ್ಯ ದೇಸೆ ನ್ಯೂಸ್

ಬೆಂಗಳೂರು: ವಿಧಾನಪರಿಷತ್‌ನ ಶಿಕ್ಷಕರ ಕ್ಷೇತ್ರದಿಂದ ನಡೆದ ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ಎನ್‌ಡಿಎ ಅಭ್ಯರ್ಥಿ ಎ.ಪಿ.ರಂಗನಾಥ ಅವರು ಪ್ರಬಲ ಅಭ್ಯರ್ಥಿ ಎಂದು ಬಿಂಬಿಸಲ್ಪಟ್ಟ ಪುಟ್ಟಣ್ಣ ಅವರನ್ನು ಸೋಲಿಸಿ ಭರ್ಜರಿ ಗೆಲುವು ಸಾಧಿಸಿರುವುದು ಜೆಡಿಎಸ್ ಪಾಳಯದಲ್ಲಿ ಸಂಭ್ರಮದ ವಾತಾವರಣ ನಿರ್ಮಿಸಿದೆ. ವಿಧಾನಪ-ರಿಷತ್‌ನ ನಾಲ್ಕೂ ಸ್ಥಾನಗಳನ್ನು ಎನ್‌ಡಿಎ ಮೈತ್ರಿಕೂಟ ಗೆದ್ದುಕೊಂಡಿರುವುದು ರಾಜ್ಯ ರಾಜ-ಕೀಯದಲ್ಲಿ ಹೊಸ ಸಂಚಲನ ಮೂಡಿಸಿದೆ.

ಈ ಹಿನ್ನೆಲೆಯಲ್ಲಿ ಜೆಡಿಎಸ್ ಶಾಸಕಾಂಗ ಪಕ್ಷದ ವತಿಯಿಂದ ಇಂದು ವಿಧಾನಸೌಧದಲ್ಲಿ ಅಭಿನಂದನಾ ಸಭೆ ಆಯೋಜಿಸಲಾಗಿತ್ತು. ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಹಾಗೂ ಶಾಸಕ ಸುರೇಶ್ ಬಾಬು ಮತ್ತು ವಿಧಾನಪರಿಷತ್‌ನ ಜೆಡಿ-ಎಸ್ ಶಾಸಕಾಂಗ ಪಕ್ಷದ ಉಪನಾಯಕ ಟಿ.ಎ.ಶರವಣ ಅವರು, ಚುನಾವಣೆಯಲ್ಲಿ ದಿಗ್ವಿ-ಜಯ ಸಾಧಿಸಿದ ಎ.ಪಿ.ರಂಗನಾಥ ಅವರನ್ನು ಹೃತ್ಪೂರ್ವಕವಾಗಿ ಸನಾನಿಸಿ ಅಭಿನಂದಿಸಿದರು. ಈ ಕಾರ್ಯಕ್ರಮವು ವಿಜಯೋತ್ಸವದ



ಸಂಭ್ರಮಕ್ಕೆ ಸಾಕ್ಷಿಯಾಯಿತು. ಪಕ್ಷದ ಶಾಸಕರು ಹಾಗೂ ಮುಖಂಡರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ವಿಧಾನಪರಿಷತ್ ಸದಸ್ಯ ಹಾಗೂ ಜೆಡಿ-ಎಸ್ ಶಾಸಕಾಂಗ ಪಕ್ಷದ ಉಪನಾಯಕ ಟಿ.ಎ. ಶರವಣ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಪತನದ ಆರಂಭವಾಗಿದೆ. ಬಿಜೆಪಿ-ಜೆಡಿಎಸ್ ಮೈತ್ರಿಕೂಟವು ಎನ್‌ಡಿಎ ಹೆಸರಿನಲ್ಲಿ ರಾಜ್ಯದಲ್ಲಿ ಹೊಸ ರಾಜಕೀಯ ಶಕ್ತಿಯಾಗಿ ಹೊರಹೊಮಿದೆ ಎಂದು ಹೇಳಿದರು. ರಾಜ್ಯ ರಾಜಕೀಯದಲ್ಲಿ ಬದಲಾವಣೆಯ ಗಾಳಿ ಬೀಸುತ್ತಿದೆ. ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಹೀನಾಯ ಸೋಲು ಅನುಭವಿಸಲಿದೆ ಎಂಬುದಕ್ಕೆ ವಿಧಾನಪರಿಷತ್ ಚುನಾವಣೆಯಲ್ಲಿ ಮೈತ್ರಿಕೂಟ ಸಾಧಿಸಿರುವ ಪ್ರಚಂಡ ಗೆಲುವೇ ಸಾಕ್ಷಿಯಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ವಿಧಾನಪರಿಷತ್ ಚುನಾವಣೆಯ ಫಲಿತಾಂಶ ಕೇವಲ ಗೆಲುವುಸೋಲಿನ ಲೆಕ್ಕಾಚಾರವಲ್ಲ; ಅದು ರಾಜ್ಯದ ಜನರ ಜನಾದೇಶವಾಗಿದೆ. ಕಾಂಗ್ರೆಸ್ ಪಕ್ಷ ಮತ್ತು ಅದರ ಸರ್ಕಾರದ ಆಡಳಿತದಿಂದ ಜನರು ಭ್ರಮನಿರಸನಗೊಂಡಿದ್ದಾರೆ. ಆಡಳಿತಾರೂಢ ಕಾಂಗ್ರೆಸ್ ಪಕ್ಷದ ವಿರುದ್ಧ ಜನರ ಅಸಮಾಧಾನ ಹೆಚ್ಚಾಗಿದ್ದು, ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷವನ್ನು ಜನರು ತಿರಸ್ಕರಿಸಲಿರುವುದು ನಿಶ್ಚಿತ ಎಂದು ಶರವಣ ಅವರು ವಾಗ್ದಾಳಿ ನಡೆಸಿದರು.

ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ಒಗ್ಗಟ್ಟು, ಕಾರ್ಯಕರ್ತರ ಪರಿಶ್ರಮ ಮತ್ತು ಜನರ ಬೆಂಬಲದಿಂದ ಈ ಐತಿಹಾಸಿಕ ಗೆಲುವು ಸಾಧ್ಯವಾಗಿದೆ. ವಿಧಾನಪ-ರಿಷತ್‌ನ ನಾಲ್ಕೂ ಸ್ಥಾನಗಳಲ್ಲಿ ಮೈತ್ರಿಕೂಟ ಜಯಗಳಿಸಿರುವುದು ರಾಜ್ಯದ ರಾಜಕೀಯ ಭವಿಷ್ಯದ ದಿಕ್ಕನ್ನು ಸೂಚಿಸುವ ಮಹತ್ವದ ಬೆಳವಣಿಗೆಯಾಗಿದೆ ಎಂದು ಅವರು ತಿಳಿಸಿದರು.

ಈ ಚುನಾವಣೆಯ ಫಲಿತಾಂಶ ರಾಜ್ಯ ರಾಜಕೀಯದಲ್ಲಿ ಟ್ರೆಂಡ್‌ಸೆಟ್ಟರ್ ಆಗಲಿದೆ. ಮುಂಬರುವ ದಿನಗಳಲ್ಲಿ ಎನ್‌ಡಿಎ ಮೈತ್ರಿಕೂಟ ಮತ್ತಷ್ಟು ಬಲಿಷ್ಠವಾಗಿ ಬೆಳೆದು, ರಾಜ್ಯದಲ್ಲಿ ರಾಜ-ಕೀಯ ಬದಲಾವಣೆಗೆ ಮುನ್ನುಡಿ ಬರೆಯಲಿದೆ ಎಂದು ಟಿ.ಎ.ಶರವಣ ವಿಶ್ವಾಸ ವ್ಯಕ್ತಪಡಿಸಿದರು.

ನ .26 ರಂದು ಮೈಸೂರಿನಲ್ಲಿ ಸಂವಿಧಾನ ದಿನ ಆಚರಣೆ

❏ ನೈಜ್ಯ ದೇಸೆ ನ್ಯೂಸ್

ಮೈಸೂರು: ನವೆಂಬರ್ 26 ರಂದು ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಅತ್ಯಂತ ವಿಜೃಂಭಣೆಯಿಂದ 'ರಾಜ್ಯ ಮಟ್ಟದ ಸಂವಿಧಾನ ದಿನ'ವನ್ನು ಆಯೋಜಿಸಲು ನಿರ್ಧರಿಸಲಾಗಿದ್ದು, ಈ ಕುರಿತು ಇಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಪೂರ್ವಭಾವಿ ಸಭೆ ನಡೆಯಿತು.



ಗೃಹ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಈ ಮಹತ್ವದ ಸಭೆಯಲ್ಲಿ, ಸಂವಿಧಾನ ದಿನಾಚರಣೆಯನ್ನು ಅರ್ಥ-ಪೂರ್ಣವಾಗಿ ಹಾಗೂ ರಾಜ್ಯಮಟ್ಟದಲ್ಲಿ ಯಶಸ್ವಿಯಾಗಿ ಆಯೋಜಿಸುವ ಬಗ್ಗೆ ವಿವರವಾದ ಚರ್ಚೆ ನಡೆಸಲಾಯಿತು. ಹಳೆ ಮೈಸೂರು ಭಾಗದ ಶಾಸಕರು ಹಾಗೂ ಸಚಿವರು ಭಾಗವಹಿಸಿದ್ದರು. ಇದಕ್ಕೂ ಮುನ್ನ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬ್ರೇಕ್‌ಫಾಸ್ಟ್ ಮೀಟಿಂಗ್ ನಡೆಸಿದರು. ಈ ವೇಳೆ, ಸ್ಪಿಂಗ್ ಬಗ್ಗೆ ಖುದ್ದು ಪ್ರಸ್ತಾಪಿಸಿದ ಅವರು, ಈ ವರೆಗೂ ಯಾರನ್ನು ಬಂಧಿಸದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು ಎನ್ನಲಾಗಿದೆ.

ಬೆಳಗಾವಿಯಲ್ಲಿ 'ಅಂಚೆಗೆ ಹೋಗದ ಪತ್ರ' ಚಲನಚಿತ್ರ ಟ್ರೈಲರ್ ಬಿಡುಗಡೆ

❏ ನೈಜ್ಯ ದೇಸೆ ನ್ಯೂಸ್

ಬೆಳಗಾವಿ: ಸ್ಥಳೀಯ ಕಲಾವಿದರು, ತಂತ್ರಜ್ಞರು ಹಾಗೂ ಯುವ ಪ್ರತಿಭೆಗಳನ್ನೊಳಗೊಂಡ 'ಅಂ-ಚೆಗೆ ಹೋಗದ ಪತ್ರ' ಕನ್ನಡ ಚಲನಚಿತ್ರದ ಟ್ರೇಲರ್ ಬಿಡುಗಡೆ ಸಮಾರಂಭವು ಬೆಳಗಾವಿಯ ಕನ್ನಡ ಭವನದಲ್ಲಿ ನೆರವೇರಿತು.

ಅತಿಥಿಗಳಾಗಿ ಕಿತ್ತೂರು ಶಾಸಕ ಬಾಬಾಸಾಹೇಬ ಪಾಟೀಲ ಹಾಗೂ ಕೆಪಿಸಿಸಿ ಸದಸ್ಯೆ ಶ್ರೀಮತಿ ರೋಹಿಣಿ ಬಾಬಾಸಾಹೇಬ ಪಾಟೀಲ ಆಗಮಿಸಿ ಟ್ರೈಲರ್ ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ನಿರ್ದೇಶಕ ಪ್ರವೀಣ ಸುತಾರ ಮಾತನಾಡಿ ಜಿಲ್ಲೆಯ ವಿವಿಧ ಸ್ಥಳಗಳಲ್ಲೇ ಚಿತ್ರೀಕರಣ ನಡೆಸಿದ್ದು, ಚಿತ್ರದ ಕಥಾ-ವಸ್ತು, ನಿರ್ಮಾಣದ ಹಿಂದಿನ ಪ್ರಯತ್ನಗಳು, ಚಿತ್ರತಂಡದ ಪರಿಶ್ರಮ, ಹೊಸ ಪ್ರತಿಭೆಗಳ ಸಹಕಾರದೊಂದಿಗೆ ರೂಪುಗೊಂಡಿರುವ



ಕುರಿತು ಅನುಭವಗಳನ್ನು ಹಂಚಿಕೊಂಡರು.

ಚಿತ್ರದ ನಿರ್ಮಾಪಕರಾದ ಮಂಜುನಾಥ ಹುಲಮನಿ, ಶಕುಂತಲಾ ಹುಲಮನಿ, ಪ್ರಕಾಶ ಮುಂಗುರವಾಡಿ, ವೀಣಾ ಮುಂಗರವಾಡಿ, ಸಾಹಿತಿ ಯ.ರು.ಪಾಟೀಲ, ಮಹಾಂತೇಶ ಹಲಗಿಮರ್ಡಿ, ಬಸವರಾಜ ಹಿರೇಮಠ ಹಾಗೂ ಭರ್ಮಾ ಮೊಟ್ರೆ , ಯುವ ಮುಖಂಡ ಸಚಿನ ಪಾಟೀಲ, ಜಿಪಂ ಮಾಜಿ ಸದಸ್ಯ ನಿಂಗಪ್ಪ ಅರಿಕೇರಿ, ಆರ್.ಸಿ.ಪಾಟೀಲ, ಬಾಳಾಸಾಹೇಬ ದೇಸಾಯಿ, ಬಸವರಾಜ ತಿಗಡಿ, ಚೇತನ ಹಿರೇಮಠ, ಸಿದ್ದಯ್ಯ ಧಾರವಾಡ, ನಾಯಕಿಯರಾದ ಸಹನಾ ಪ್ರಕಾಶ ಮತ್ತು ಸೌಮ್ಯ ಉಪಸ್ಥಿತರಿದ್ದರು.

ನಾಯಕಿಯಾಗಿ ಸಹನಾ ಪ್ರಕಾಶ ಜೊತೆಗೆ "ರಕ್ಕಸಪುರದೊಳ" ಖ್ಯಾತಿಯ ಸೌಮ್ಯ ಅಮರಪೂರಕರ್ ಮತ್ತು "ಮಹಾನಟಿ ರನ್ನರ್ ಆಫ್" ವರ್ಷಾ ದಿಗ್ರೆಜೆ ಪ್ರಮುಖ ಪಾತ್ರಗಳಲ್ಲಿದ್ದು , ಚಿತ್ರಕ್ಕೆ ದಿವಾಕರ ಎಂ ಅವರ ಸಂಗೀತ , ಮಂಜು ಬಸವರಾಜ ಛಾಯಾಗ್ರಹಣ, ಸಂಕಲನ ಶಿವ ಗಂಗಾಧರ ರಂಜಿತ ಪಾಂಡೆ ವಿ.ಎಫ್.ಎಕ್ಸ್ , ಪತ್ರಿಕಾ ಸಂಪರ್ಕ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ, ಸಹ ನಿರ್ದೇಶಕರಾಗಿ ವೀಣಾ ಮತ್ತು ವಿಶಾಲ ಕೆಲಸ ಮಾಡಿದ್ದು, ಪ್ರವೀಣ ತಾನಾಜಿ ಸುತಾರ, ಮಂಜುನಾಥ ಹುಲಮನಿ, ವರ್ಚಸ್ ಮತ್ತು ಪರದಿಶೆ ನಿರ್ಮಾಪಕರಾಗಿದ್ದಾರೆ.

'ಅಂಚೆಗೆ ಹೋಗದ ಪತ್ರ' ಚಿತ್ರದ ಟ್ರೇಲರ್ ಇದೀಗ 'ವೇದಸ್ಯ ಮ್ಯೂಸಿಕ್' ಯೂಟ್ಯೂಬ್ ಚಾನೆಲ್‌ನಲ್ಲಿ ಬಿಡುಗಡೆಯಾಗಿದ್ದು ಶೀಘ್ರದಲ್ಲೇ ಚಿತ್ರವನ್ನು ಚಿತ್ರಮಂದಿರಗಳಲ್ಲಿ ಬಿಡುಗಡೆ ಮಾಡುವದಾಗಿ ನಿರ್ದೇಶಕ ಸುತಾರ ಹೇಳಿದರು. ಡಾ.ಪ್ರಭು ಗಂಜಿಹಾಳ

ರಾಜ್ಯ ಸರ್ಕಾರದ ವೈಫಲ್ಯಗಳ ಅನಾವರಣಕ್ಕೆ ನ. 2 ರಿಂದ 6 ರವರೆಗೆ ರಾಜ್ಯದ 10 ಕಡೆ ಬಿಜೆಪಿ ಪಾದಯಾತ್ರೆ: ಎನ್. ರವಿಕುಮಾರ್

❏ ನೈಜ್ಯ ದೇಸೆ ನ್ಯೂಸ್

ಬಳ್ಳಾರಿ: "ರಾಜ್ಯದ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ಮತ್ತು ಜನವಿರೋಧಿ ನೀತಿಗಳನ್ನು ಜನರ ಮುಂದೆ ಅನಾವರಣಗೊಳಿಸುವ ಉದ್ದೇಶದಿಂದ ಕರ್ನಾಟಕ ಬಿಜೆಪಿ ವತಿಯಿಂದ ನವೆಂಬರ್ 2 ರಿಂದ 6 ರವರೆಗೆ ರಾಜ್ಯದ 10 ಪ್ರಮುಖ ಸ್ಥಳಗಳಲ್ಲಿ ಪ್ರಚಾರ ಪಾದಯಾತ್ರೆಗಳನ್ನು ಹಮ್ಮಿಕೊಳ್ಳಲಾಗಿದೆ" ಎಂದು ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್ ತಿಳಿಸಿದರು.

ಇಲ್ಲಿನ ಮೋಕಾ ರಸ್ತೆಯಲ್ಲಿರುವ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. "ರಾಜ್ಯದಲ್ಲಿ ಪ್ರಜಾಪ್ರಭುತ್ವವನ್ನು ಉಳಿಸಿ, ಅರಾಜಕತೆಯನ್ನು ಅಳಿಸಿ" ಎಂಬ ಘೋಷವಾಕ್ಯದೊಂದಿಗೆ ಈ ಬೃಹತ್ ಜಾಗೃತಿ ಅಭಿಯಾನ ಮತ್ತು ಪಾದಯಾತ್ರೆ



ನಡೆಯಲಿದೆ. ಪ್ರಸ್ತುತ ಸರ್ಕಾರದ ಆಡಳಿತಾವಧಿಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಭ್ರಷ್ಟಾಚಾರ ತಾಂಡವವಾಡುತ್ತಿದೆ.

ಸರ್ಕಾರದ ಈ ಎಲ್ಲಾ ಆಡಳಿತಾತ್ಮಕ ವೈಫಲ್ಯಗಳ ವಿರುದ್ಧ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದೇ ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ಅವರು ವಿವರಿಸಿದರು. ಗಣ್ಯರ ಉಪಸ್ಥಿತಿ: ಪತ್ರಿಕಾಗೋಷ್ಠಿಯಲ್ಲಿ ವಿಧಾನ ಪರಿಷತ್ ಸದಸ್ಯ ವೈ. ಎಂ. ಸತೀಶ್, ರಾಜ್ಯ ಬಿಜೆಪಿ ಕಾರ್ಯದರ್ಶಿ ಕೆ. ಎಸ್. ದಿವಾಕರ್, ರಾಜ್ಯ ಮಹಿಳಾ ಕಾರ್ಯದರ್ಶಿ ಕುಮಾರಿ ಸುಗುಣ, ಹಿರಿಯ ಮುಖಂಡ ಡಾ. ಮಣಿಪಾಲ್, ಮಾಜಿ ಜಿಲ್ಲಾ ಅಧ್ಯಕ್ಷ ಮುರಾರಿಗೌಡ, ಮುಖಂಡರುಗಳಾದ ಗುರುಲಿಂಗ ಗೌಡ, ಹನುಮಂತಪ್ಪ, ಬಿ. ಕೆ. ಸುಂದರ್, ಯರಂಗಳಿ ತಿಮ್ಮಾರೆಡ್ಡಿ, ನೂರ್ ಭಾಷಾ, ಸಾಧನ ಹಿರೇಮಠ, ತಿಪ್ಪಣ್ಣ ಹಾಗೂ ಜಿಲ್ಲೆಯ ಎಲ್ಲಾ ಪದಾಧಿಕಾರಿಗಳು ಭಾಗವಹಿಸಿದ್ದರು.

ಕಾಂಗ್ರೆಸ್‌ನಲ್ಲಿ ತಳಮಟ್ಟದ ಹೋರಾಟಗಾರರಿಗೆ ಮನ್ನಣೆ: ರಾಹುಲ್ ಗಾಂಧಿ ಆಶಯದಂತೆ ಆಯ್ಕೆ: ಎಸ್.ಡಿ.ಮಖಾಂದರ್ ಭರವಸೆ

ಕಂಪ್ಲಿ ಕಾಂಗ್ರೆಸ್‌ನಲ್ಲಿ ಯುವ ನಾಯಕತ್ವದ ಹುರುಪು: ಆಕಾಂಕ್ಷಿಗಳಿಂದ ಮುಗಿಬಿದ್ದ ಅರ್ಜಿ

❏ ನೈಜ್ಯ ದೇಸೆ ನ್ಯೂಸ್

ಕಂಪ್ಲಿ: ಕಾಂಗ್ರೆಸ್ ಪಕ್ಷಕ್ಕಾಗಿ ಪ್ರಾಮಾಣಿಕವಾಗಿ ಶ್ರಮಿಸುವ ಮತ್ತು ಪಕ್ಷದ ತತ್ವ ಸಿದ್ಧಾಂತಗಳಿಗೆ ಬದ್ಧರಾಗಿರುವ ನಿಷ್ಠಾವಂತ-ರಿಗೆ ಸೂಕ್ತ ನಾಯಕತ್ವ ಹಾಗೂ ಉನ್ನತ ಜವಾಬ್ದಾರಿಗಳನ್ನು ದೊರಕಿಸಿಕೊಡುವುದು ಎಐಸಿಸಿ ನಾಯಕ ರಾಹುಲ್ ಗಾಂಧಿ ಅವರ ಪ್ರಮುಖ ಆಶಯವಾಗಿದೆ ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್.ಡಿ.ಮಖಾಂದರ್ ತಿಳಿಸಿದ್ದಾರೆ.

ಪಟ್ಟಣದ ಲಡ್ಡು ಫಂಕ್ಷನ್ ಹಾಲ್‌ನಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿದ್ದ 'ಸಂಘಟನಾ ಸೃಜನ್ ಅಭಿಯಾನ' ಕಾರ್ಯಕ್ರಮದಲ್ಲಿ ಭಾಗವಹಿಸಿ, ಮುಂಬರುವ ಜಿಲ್ಲಾ ಸಮಿತಿ, ಬ್ಲಾಕ್ ಕಾಂಗ್ರೆಸ್ ಮತ್ತು ಪಕ್ಷದ ವಿವಿಧ ಮೋರ್ಚಾಗಳ ಪದಾಧಿಕಾರಿಗಳ



ಹುದ್ದೆಗಳ ಆಕಾಂಕ್ಷಿಗಳಿಂದ ಅರ್ಜಿಗಳನ್ನು ಸ್ವೀಕರಿಸಿ ಅವರು ಮಾತನಾಡಿದರು. ಆಯ್ಕೆಗೆ ಮುಖ್ಯ ಮಾನದಂಡಗಳು: ಪಕ್ಷ ನಿಷ್ಠೆ ಮತ್ತು ಹೋರಾಟದ ಗುಣ ಹೊಂದಿದವರಿಗೆ ಪಕ್ಷದ ಕಷ್ಟಕಾಲದಲ್ಲಿ ಜೊತೆಯಾಗಿ ನಿಂತು ಹೋರಾಟ ಮಾಡುವ ಮನೋಭಾವ ಹೊಂದಿರುವವರಿಗೆ ಮೊದಲ ಆದ್ಯತೆ ನೀಡಲಾಗುವುದು. ಎಲ್ಲಾ ಸಮುದಾಯಗಳನ್ನು ಸಮಾನವಾಗಿ ಗೌರವಿಸಿ, ಎಲ್ಲರನ್ನೂ ಒಟ್ಟಿಗೆ ಕರೆದೊಯ್ಯುವ ಜನನಾಯಕತ್ವದ ಗುಣ ಮುಖ್ಯವಾಗಿದೆ. ಸರ್ಕಾರದ ಜನಪರ ಕಾರ್ಯಕ್ರಮಗಳನ್ನು ಮನೆಮನೆಗೆ ತಲುಪಿಸುವ ಮತ್ತು ವಿರೋಧ ಪಕ್ಷಗಳ ವೈಫಲ್ಯಗಳನ್ನು ಸಾರ್ವಜನಿಕವಾಗಿ ತಾರ್ಕಿಕವಾಗಿ ಬಯಲಿಗೆಳೆಯುವ ಚತುರತೆ ಇರಬೇಕು. ಪಕ್ಷದ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸಲು ಈ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಅರ್ಹ ಮತ್ತು ಸಕ್ರಿಯ ಕಾರ್ಯಕರ್ತರಿಗೆ ಖಂಡಿತವಾಗಿಯೂ ಮನ್ನಣೆ ಸಿಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಅಲ್ಪಸಂಖ್ಯಾತರ ಸೆಲ್ ರಾಜ್ಯ ಉಪಾಧ್ಯಕ್ಷ ಸ್ವಾಯ್ನಿ, ಸಂಯೋಜ-ಕ ಕನಕರಾಜ, ಜಿಲ್ಲಾ ಗ್ರಾಮೀಣ ಘಟಕದ ಅಧ್ಯಕ್ಷ ಮಲ್ಲಿಕಾರ್ಜುನ ಗೆಣಿಕಿಹಾಳ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ಶ್ರೀನಿವಾಸರಾವ್, ಮಹಿಳಾ ಬ್ಲಾಕ್ ತಾಲೂಕು ಪದಾಧಿಕಾ-ರಿಗಳು ಹಾಗೂ ಪಕ್ಷದ ಪ್ರಮುಖ ಮುಖಂಡರು ಮತ್ತು ನೂರಾರು ಸಂಖ್ಯೆಯ ಯುವ ಆಕಾಂಕ್ಷಿಗಳು ಉಪಸ್ಥಿತರಿದ್ದರು.

ಸೈಬರ್ ಅಪರಾಧಗಳ ತಡೆಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದ ತಾಳಿಕೋಟಿ ಪೊಲೀಸರು

❏ ನೈಜ್ಯ ದೇಸೆ ನ್ಯೂಸ್

ತಾಳಿಕೋಟಿ: ವಿಜಯಪುರ ಜಿಲ್ಲಾ ಪೊಲೀಸ್ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾಗಿರುವ ಅಪರಾಧ ತಡೆ ಮಾಸಾಚರಣೆ ಅಂಗವಾಗಿ, ತಾಳಿಕೋಟಿ ಪೊಲೀಸ್ ಠಾಣೆಯ ವತಿಯಿಂದ ಗುರುವಾರ ಪಟ್ಟಣದ ಪ್ರಮುಖ ಸ್ಥಳಗಳಲ್ಲಿ ಸೈಬರ್ ಅಪರಾಧಗಳ ಕುರಿತು ಸಾರ್ವಜನಿಕ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಠಾಣೆಯ ಪಿಎಸ್‌ಐ ಜ್ಯೋತಿ ಕೋತ್ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಸೈಬರ್ ಅಪರಾಧಗಳ ಬಗ್ಗೆ ಜಾಗೃತಿ ಮೂಡಿಸಲಾಯಿತು. ಈ ಸಂದರ್ಭದಲ್ಲಿ ಇಲಾಖೆಯ ವತಿಯಿಂದ ಪ್ರಕಟಿಸಲಾದ ಕರಪತ್ರಗಳನ್ನು ವಿತರಿಸಿ,



ಆನ್‌ಲೈನ್ ವಂಚನೆಗಳಿಂದ ರಕ್ಷಿಸಿಕೊಳ್ಳುವ ವಿಧಾನಗಳ ಕುರಿತು ಮಾಹಿತಿ ನೀಡಲಾಯಿತು. ಪಿಎಸ್‌ಐ ಜ್ಯೋತಿ ಕೋತ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧಗಳ ಸಂಖ್ಯೆ ಹೆಚ್ಚುತ್ತಿದ್ದು, ಸಾರ್ವಜನಿಕರು ಹೆಚ್ಚಿನ ಜಾಗ್ರತೆ ವಹಿಸುವುದು ಅಗತ್ಯವಾಗಿದೆ.

ಅಪರಿಚಿತ ವ್ಯಕ್ತಿಗಳೊಂದಿಗೆ ಆಧಾರ್ ಸಂಖ್ಯೆ, ಬ್ಯಾಂಕ್ ಖಾತೆಯ ವಿವರಗಳು ಹಾಗೂ ಒಟಿಪಿಯನ್ನು ಯಾವುದೇ ಕಾರಣ-ಕ್ಕೂ ಹಂಚಿಕೊಳ್ಳಬಾರದು. ಸಾಮಾಜಿ-ಕ ಜಾಲತಾಣಗಳಲ್ಲಿ ನಕಲಿ ಖಾತೆಗಳ ಮೂಲಕ ವಂಚನೆ ನಡೆಯುವ ಸಾಧ್ಯತೆ ಇರುವುದರಿಂದ ವೈಯಕ್ತಿಕ ಮಾಹಿತಿಯನ್ನು ಹಂಚಿಕೊಳ್ಳುವಾಗ ಎಚ್ಚರಿಕೆ ವಹಿಸಬೇಕು ಎಂದು ಸಲಹೆ ನೀಡಿದರು. ಸೈಬರ್ ಅಪರಾಧಗಳನ್ನು ತಡೆಗಟ್ಟುವಲ್ಲಿ ಸಾರ್ವಜನಿಕ ಜಾಗೃತಿ ಪ್ರಮುಖ ಪಾತ್ರ ವಹಿಸುತ್ತದೆ. ಒಂದು ವೇಳೆ ಸೈಬರ್ ವಂಚನೆಗೆ ಒಳಗಾದರೆ ತಕ್ಷಣವೇ ಸಂಬಂಧಪಟ್ಟ ಇಲಾಖೆಗೆ ಮಾಹಿತಿ ನೀಡಿ ದೂರು ದಾಖಲಿಸಬೇಕು. ಸೈಬರ್ ಅಪರಾಧಗಳ ಕುರಿತು ದೂರು ಸಲ್ಲಿಸಲು 1930 ಉಚಿತ ಸಹಾಯವಾಣಿ ಸಂಖ್ಯೆಗೆ ಕರೆ ಮಾಡಬಹುದು ಅಥ-ವಾ www.cybercrime.gov.in ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ದೂರು ದಾಖಲಿಸಬಹುದು. ಅಲ್ಲದೆ, ವಿಜಯಪುರ ಪೊಲೀಸ್ ಕಂಟ್ರೋಲ್ ರೂಂನ ದೂರವಾಣಿ ಸಂಖ್ಯೆ 08352-250751 ಅಥವಾ ಮೊಬೈಲ್ ಸಂಖ್ಯೆ 94808 04200 ಸಂಪರ್ಕಿಸಿ ಮಾಹಿತಿ ನೀಡಬಹುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಸಾಹಿತ್ಯ ಸಿಂಚನ

ನೆರಳಿನೊಂದಿಗೆ ಸಂಭಾಷಣೆ

ನನ್ನ ಹೆಜ್ಜೆಯ ಜೊತೆ ಹೆಜ್ಜೆ ಹಾಕುವೆ ನೀನು,
ಮೌನದ ಮಾತುಗಳನ್ನೇ ಕೇಳುವೆ ನೀನು.
"ಯಾಕೆ ನನ್ನನ್ನು ಹಿಂಬಾಲಿಸುವೆ?" ಎಂದೆ ನಾನು,
"ನೀ ಇರುವವರೆಗೂ ಜೊತೆಯಲ್ಲಿರುವೆ" ಎಂದೆ ನೀನು.

ನಾನು ನಗುವಾಗ ನಗುವೆ ನೀನು,
ನಾನು ಅಳುವಾಗ ಮೌನವಾಗಿರುವೆ ನೀನು.
ನನ್ನ ಕನಸುಗಳಿಗೆ ಸಾಕ್ಷಿಯಾಗುವೆ,
ನನ್ನ ನೋವಿಗೆ ಸಂಗಾತಿಯಾಗುವೆ.

ನಾನು ಓಡಿದರೆ ನೀನೂ ಓಡುವೆ,
ನಾನು ನಿಂತರೆ ನೀನೂ ನಿಲ್ಲುವೆ.
ಜಗವೆಲ್ಲ ನನ್ನನ್ನು ಮರೆತರೂ,
ನನ್ನ ನೆರಳಾಗಿ ನೀನು ಉಳಿಯುವೆ.

ಬೆಳಕಿನ ಜೊತೆ ಹುಟ್ಟಿದರೂ ನೀನು,
ಕತ್ತಲಲ್ಲಿ ಮಾತ್ರ ಮರೆಯಾಗುವೆ.
ನನ್ನ ಏಕಾಂತದ ಕ್ಷಣಗಳಲಿ,
ನನ್ನೊಡನೆ ಮೌನವಾಗಿ ಮಾತನಾಡುವೆ.

"ನೀ ಯಾರು?" ಎಂದು ಕೇಳಿದಾಗ,
"ನಿನ್ನದೇ ಮತ್ತೊಂದು ರೂಪ" ಎಂದೆ ನೀನು.
ನನ್ನ ಬದುಕಿನ ಕೊನೆಯ ಹೆಜ್ಜೆಯವರೆಗೂ,
ನನ್ನ ನೆರಳಾಗಿ ಜೊತೆಯಿರುವೆ ನೀನು.

ದೇವದುರ್ಗದಲ್ಲಿ ನೂತನ ರಕ್ತ ನಿಧಿ ಕೇಂದ್ರಕ್ಕೆ ಸಂಸದ ಜಿ. ಕುಮಾರ್ ನಾಯಕ ಭೇಟಿ

ರಕ್ತದ ಕೊರತೆ ನೀಗಿಸಲು ವಿಶ್ವನಾಥ್ ಕೋರಿ ಅವರ ಮಹತ್ವದ ಹೆಜ್ಜೆ ಸಾರ್ವಜನಿಕರಿಗೆ ತುರ್ತು ಸಂದರ್ಭದಲ್ಲಿ ಅನುಕೂಲ

❑ ನೈಜ್ಯ ದೆಸೆ ನ್ಯೂಸ್

#ದೇವದುರ್ಗ: ನಗರದ ಜನರಿಗೆ ತುರ್ತು ಸಂದರ್ಭಗಳಲ್ಲಿ ರಕ್ತದ ಲಭ್ಯತೆ ಕಲ್ಪಿಸುವ ಉದ್ದೇಶದಿಂದ ನೂತನವಾಗಿ ಪ್ರಾರಂಭಿಸಲಾದ 'ದೇವದುರ್ಗ ರಕ್ತ ನಿಧಿ ಕೇಂದ್ರ'ಕ್ಕೆ ಸಂಸದ ಜಿ. ಕುಮಾರ್ ನಾಯಕ ಅವರು ಭೇಟಿ ನೀಡಿ ಕೇಂದ್ರದ ಕಾರ್ಯಚಟುವಟಿಕೆಗಳು ಹಾಗೂ ಅಲ್ಲಿನ ಸೌಲಭ್ಯಗಳನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಸದ ಜಿ. ಕುಮಾರ್ ನಾಯಕ ಅವರು, ಆರೋಗ್ಯ ತುರ್ತು ಪರಿಸ್ಥಿತಿಗಳಲ್ಲಿ ರಕ್ತವು ಅತ್ಯಂತ ಅಮೂಲ್ಯವಾಗಿದ್ದು, ಸಮಯಕ್ಕೆ ಸರಿಯಾಗಿ ರಕ್ತ ದೊರೆಯದಿದ್ದರೆ ರೋಗಿಗಳು ಹಾಗೂ ಅವರ ಕುಟುಂಬದವರು ತೊಂದರೆ ಅನುಭವಿಸಬೇಕಾಗುತ್ತದೆ. ದೇವದುರ್ಗ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ರಕ್ತದ ಅಗತ್ಯ ಎದುರಾದಾಗ ಅನುಕೂಲವಾಗುವ ನಿಟ್ಟಿನಲ್ಲಿ



ರಕ್ತ ನಿಧಿ ಕೇಂದ್ರವನ್ನು ಪ್ರಾರಂಭಿಸಿರುವುದು ಉತ್ತಮ ಕಾರ್ಯವಾಗಿದೆ ಎಂದು ಹೇಳಿದರು.

ಯುವ ಮಿತ್ರ ವಿಶ್ವನಾಥ್ ಕೋರಿ ಅವರು ಈ ಭಾಗದಲ್ಲಿ ರಕ್ತದ ಅಭಾವವನ್ನು ನೀಗಿಸುವ ಉದ್ದೇಶದಿಂದ ಕೈಗೊಂಡಿರುವ ಪ್ರಯತ್ನ ಶ್ಲಾಘನೀಯವಾಗಿದೆ. ಇಂತಹ ಜನೋಪಯೋಗಿ ಕಾರ್ಯಗಳು ಸಮಾಜ-ಕ್ಕೆ ಮಾದರಿಯಾಗಿದ್ದು, ಅಗತ್ಯವಿರುವವರಿಗೆ ಸಕಾಲದಲ್ಲಿ ನೆರವು ದೊರೆಯಲು ಸಹಕಾ-ರಿಯಾಗಲಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನಂತರ ಕೇಂದ್ರದಲ್ಲಿರುವ ವಿವಿಧ ಉಪಕರಣಗಳು ಹಾಗೂ ಇತರ ಸೌಲಭ್ಯಗಳನ್ನು ವೀಕ್ಷಿಸಿದ ಅವರು, ಕೇಂದ್ರದ ಸ್ಥಾಪನೆಗೆ ಶ್ರಮಿಸಿದ ವಿಶ್ವನಾಥ್ ಕೋರಿ ಹಾಗೂ ಅವರ ತಂಡದ ಕಾರ್ಯಕ್ಕೆ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ದೇವದುರ್ಗ ರಕ್ತ ನಿಧಿ ಕೇಂದ್ರದ ವತಿಯಿಂದ ಸಂಸದ ಜಿ. ಕುಮಾರ್ ನಾಯಕ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು. ಅಲ್ಲದೆ, ಪರಮಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮೀಜಿಯವರ ಪುಸ್ತಕಗಳನ್ನು ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ, ಕಾಂಗ್ರೆಸ್ ಮುಖಂಡರಾದ ರಾಜಶೇಖರ್ ನಾಯಕ್, ಜಯಂತರಾವ್ ಪತಂಗೆ, ಶರಣಗೌಡ ಸೇರಿದಂತೆ ಹಲವು ಮುಖಂಡರು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಕುಷ್ಟಗಿಯಲ್ಲಿ ಮೆಕ್ಕೆಜೋಳಕ್ಕೆ ದಾಖಲೆ ದರ ಕ್ವಿಂಟಾಲ್‌ಗೆ 3,050 ಬೆಳೆಗಾರರ ಮುಖದಲ್ಲಿ ಮಂದಹಾಸ

❑ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ಪ್ರಸಕ್ತ ವರ್ಷ ಬರಗಾಲದ ಪರಿಣಾಮ ಮೆಕ್ಕೆಜೋಳದ ಇಳುವರಿ ಅರ್ಧಕ್ಕಿಂತ ಕಡಿಮೆಯಾಗಿದ್ದು, ಮಾರುಕಟ್ಟೆಯಲ್ಲಿ ಮೆಕ್ಕೆಜೋಳಕ್ಕೆ ಉತ್ತಮ ಬೆಲೆ ದೊರೆಯುತ್ತಿದೆ. ರಾಜ್ಯದ ಪ್ರಮುಖ ಕೃಷಿ6 ಉತ್ಪನ್ನ ಮಾರುಕಟ್ಟೆಗಳಲ್ಲಿ ಒಂದಾದ ಕುಷ್ಟಗಿ ಎಪಿಎಂಸಿಯಲ್ಲಿ ಇದೇ ಮೊದಲ ಬಾರಿಗೆ ಮೆಕ್ಕೆಜೋಳ ಕ್ವಿಂಟಾಲ್‌ಗೆ 3,050 ದರ ದಾಖಲಾಗಿದೆ. ಇದರಿಂದ ಬೆಳೆಗಾರರ ಮುಖದಲ್ಲಿ ಮಂದಹಾಸ ಮೂಡಿದೆ.

ಕಳೆದ ವರ್ಷಕ್ಕೆ ಹೋಲಿಸಿದರೆ ಪ್ರಸಕ್ತ ವರ್ಷ ಬರದ ಹೊಡೆತಕ್ಕೆ ಸಿಲುಕಿ ಮೆಕ್ಕೆಜೋಳದ ಇಳುವರಿ ಗಣನೀಯವಾಗಿ ಕುಸಿದಿದೆ. ಉತ್ಪಾದನೆ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಮಾರುಕಟ್ಟೆಯಲ್ಲಿ ಮೆಕ್ಕೆಜೋಳಕ್ಕೆ ಬೇಡಿಕೆ ಹೆಚ್ಚಾಗಿದ್ದು, ಬೆಲೆ ಏರಿಕೆಯಾಗಿದೆ. ಕಳೆದ ವರ್ಷ ಅಕ್ಟೋಬರ್ ಕೊನೆಯ ವಾರದಲ್ಲಿ ಪ್ರತಿದಿನ ಅಂದಾಜು 10ರಿಂದ 20 ಸಾವಿರ ಕ್ವಿಂಟಾಲ್ ಮೆಕ್ಕೆಜೋಳದ



ವಹಿವಾಟು ನಡೆಯುತ್ತಿತ್ತು. ಮುಂದಿನ ದಿನಗಳಲ್ಲಿ ದರ ಇನ್ನಷ್ಟು ಏರಿಕೆಯಾಗುವ ಸಾಧ್ಯತೆ ಇದೆ ಎಂದು ವ್ಯಾಪಾರಿ ಟಿಪ್ಪುಸುಲ್ತಾನ್ ಗುಮಗೇರಿ ಅಭಿಪ್ರಾಯಪಟ್ಟಿದ್ದಾರೆ.

ಒಂದೆಡೆ ಬರಗಾಲದಿಂದ ಇಳುವರಿ ಕುಸಿದು ರೈತರು ಸಂಕಷ್ಟ ಅನುಭವಿಸುತ್ತಿದ್ದರೆ, ಮತ್ತೊಂದೆಡೆ ಮೆಕ್ಕೆಜೋಳಕ್ಕೆ ಉತ್ತಮ ದರ ದೊರೆಯುತ್ತಿರುವುದು ರೈತ-ರಿಗೆ ಕೊಂಚ ನೆಮ್ಮದಿ ತಂದಿದೆ.

ಕೊಲೆಯಾದ ಬಾಪೂರು ನರಸಿಂಹ ಅವರಿಗೆ ಆರ್ಯವೈಶ್ಯ ಸಮಾಜದಿಂದ ಶ್ರದ್ಧಾಂಜಲಿ

❑ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ರಾಯಚೂರು ನಗರದ ಎಲ್‌ಬಿಎಸ್ ನಗರದಲ್ಲಿ ಕೊಲೆಯಾದ ಬಾಪೂರು ನರಸಿಂಹ ಅವರಿಗೆ ಕುಷ್ಟಗಿ ಪಟ್ಟಣದ ವಾಸವಿ ದೇವಸ್ಥಾನದಲ್ಲಿ ಬುಧವಾರ ಆರ್ಯವೈಶ್ಯ ಸಮಾಜದ ವತಿಯಿಂದ ಶ್ರದ್ಧಾಂಜಲಿ ಸಲ್ಲಿಸಲಾಯಿತು.



ಈ ಸಂದರ್ಭದಲ್ಲಿ ಸಮಾಜದ ಮುಖಂಡರು ಹಾಗೂ ಯುವಕರು ಮೃತರ ಭಾವಚಿತ್ರಕ್ಕೆ ಗೌರವ ಸಲ್ಲಿಸಿ, ಮೌನಾಚರಣೆ ಮೂಲಕ ಆತ್ಮಕ್ಕೆ ಶಾಂತಿ ಕೋರಿದರು. ಇಂತಹ ಘಟನೆಗಳು ಮರುಕಳಿಸದಂತೆ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಮಾನವೀಯ ಮೌಲ್ಯಗಳನ್ನು ಕಾಪಾಡುವ ಅಗತ್ಯವಿದೆ ಎಂದು ವಾಸವಿ ಯುವಜನ ಸಂಘದ ಅಧ್ಯಕ್ಷ ಉಮೇಶ ಶೆಟ್ಟರ ಹೇಳಿದರು ಈ ಸಂದರ್ಭದಲ್ಲಿ ಪ್ರಮುಖರಾದ ಪ್ರಶಾಂತ ಶೆಟ್ಟರ, ರಾಘವೇಂದ್ರ ಶೆಟ್ಟಿ, ವೆಂಕಟೇಶ ತೆಮ್ಮಿನಾಳ, ಸಂತೋಷ ಶೆಟ್ಟರ, ಅಕ್ಷಯ ಶೆಟ್ಟರ, ರಘುರಾಮ ಕಂದಕೂರು, ಓಂಕಾರಪ್ಪ ಕಂದಕೂರು, ಪ್ರಭಾಕರ ಕಂದಕೂರು, ಬಸವರಾಜ ಶೆಟ್ಟರ, ದರ್ಶನ್ ಶೆಟ್ಟರ, ಹನಮಂತಯ್ಯ ಬಿಜಕಲ್ ಸೇರಿದಂತೆ ಸಮಾಜದ ಮುಖಂಡರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

ರಾಷ್ಟ್ರೀಯ ಮಟ್ಟದ ಮೌಲ್ಯಮಾಪನ ತಂಡದಿಂದ ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾಕ್ಕೆ ಭೇಟಿ

ಗುಣಮಟ್ಟದ ಆರೋಗ್ಯ ಸೇವೆ, ಸ್ವಚ್ಛತೆ ಮತ್ತು ರೋಗಿಗಳ ಸುರಕ್ಷತೆಗೆ ಆದ್ಯತೆ

❑ ನೈಜ್ಯ ದೆಸೆ ನ್ಯೂಸ್

ಜವಳಗೇರಾ: ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾಕ್ಕೆ ರಾಷ್ಟ್ರೀಯ ಮಟ್ಟದ ಮೌಲ್ಯಮಾಪನ ತಂಡವು ಭೇಟಿ ನೀಡಿ, ಕೇಂದ್ರದಲ್ಲಿ ಸಾರ್ವಜನಿಕ-ರಿಗೆ ಒದಗಿಸಲಾಗುತ್ತಿರುವ ಆರೋಗ್ಯ ಸೇವೆಗಳ ಗುಣಮಟ್ಟ ಹಾಗೂ ವಿವಿಧ ವಿಭಾಗಗಳ ಕಾರ್ಯನಿರ್ವಹಣೆಯನ್ನು ಪರಿಶೀಲಿಸಿತು.

ರಾಷ್ಟ್ರೀಯ ಮಟ್ಟದ ಮೌಲ್ಯಮಾಪಕರಾದ ಡಾ. ಲಲಿತ್ ಕುಮಾರ್ ಸಾಹು ಮತ್ತು ಡಾ. ಎಸ್. ಜೆ. ಅಬ್ದುಲ್ ಬರಿ ಅವರು ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಆಡಳಿತ ವೈದ್ಯಾಧಿಕಾ-ರಿಗಳಾದ ಡಾ. ಲಾಲಬಾ ಪಾಟೀಲ್ ಅವರು ತಂಡವನ್ನು ಆತ್ಮೀಯವಾಗಿ ಸ್ವಾಗತಿಸಿ, ಪ್ರಾಥ-ಮಿಕ ಆರೋಗ್ಯ ಕೇಂದ್ರದ ಕಾರ್ಯನಿರ್ವಹಣೆ, ಲಭ್ಯವಿರುವ ಸೌಲಭ್ಯಗಳು ಹಾಗೂ ವಿವಿಧ ಆರೋಗ್ಯ ಕಾರ್ಯಕ್ರಮಗಳ ಕು-ರಿತು ಸಂಪೂರ್ಣ ಮಾಹಿತಿ ನೀಡಿದರು. ತಂಡವು ರಾಷ್ಟ್ರೀಯ ಗುಣಮಟ್ಟದ ಮಾನದಂಡಗಳ ಅನುಸಾರ ಆರೋಗ್ಯ ಸೇವೆಗಳ ಗುಣಮಟ್ಟ, ಆಸ್ಪತ್ರೆಯ ಸ್ವಚ್ಛತೆ,



ರೋಗಿಗಳ ಸುರಕ್ಷತೆ, ಔಷಧಗಳ ಲಭ್ಯತೆ, ವೈದ್ಯಕೀಯ ದಾಖಲೆಗಳ ನಿರ್ವಹಣೆ, ವಿವಿಧ ವಿಭಾಗಗಳ ಕಾರ್ಯವೈಖರಿ ಹಾಗೂ ಆರೋಗ್ಯ ಕಾರ್ಯಕ್ರಮಗಳ ಅನುಷ್ಠಾನವನ್ನು ಪರಿಶೀಲಿಸಿತು.

ಈ ಸಂದರ್ಭದಲ್ಲಿ ಜಿಲ್ಲಾ ಗುಣಮಟ್ಟ ಸಲಹೆಗಾರರಾದ ಹರೀಶ್ ಪಂತಗ್ಯ,ರಾಯಚೂರು ಅವರು ಮಾತನಾಡಿ, ಆರೋಗ್ಯ ಸೇವೆಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ, ಸುರಕ್ಷಿತವಾಗಿ ಹಾಗೂ ಜನಸ್ನೇಹಿಯಾಗಿ ಒದಗಿಸಲು ಅಗತ್ಯವಿರುವ ಸುಧಾರಣಾ ಕ್ರಮಗಳ ಕುರಿತು ಗಮನಹರಿಸಲಾಯಿತು ಎಂದು ತಿಳಿಸಿದರು. ಸಾರ್ವಜನಿಕರಿಗೆ ಗುಣಮಟ್ಟದ, ಸುರಕ್ಷಿತ ಹಾಗೂ ಸಮರ್ಪಕ ಆರೋಗ್ಯ ಸೇವೆಗಳನ್ನು ಒದಗಿಸುವುದು ಆರೋಗ್ಯ ಇಲಾಖೆಯ ಪ್ರಮುಖ ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ರಾಷ್ಟ್ರೀಯ ಮಟ್ಟದ ಮೌಲ್ಯಮಾಪನಗಳು ಆರೋಗ್ಯ ಕೇಂದ್ರಗಳ ಸೇವಾ ಗುಣಮಟ್ಟವನ್ನು ಹೆಚ್ಚಿಸಲು, ಲೋಪದೋಷಗಳನ್ನು ಗುರುತಿಸಲು ಹಾಗೂ ಅಗತ್ಯ ಸುಧಾರಣೆಗಳನ್ನು ಕೈಗೊಳ್ಳಲು ಸಹಕಾರಿಯಾಗುತ್ತವೆ. ಮೌಲ್ಯಮಾಪನ ತಂಡದ ಭೇಟಿಯ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಅಗತ್ಯ ಮಾಹಿತಿ, ದಾಖಲೆಗಳು ಹಾಗೂ ವಿವಿಧ ವಿಭಾಗಗಳ ಕಾರ್ಯನಿರ್ವಹಣೆಗೆ ಸಂಬಂಧಿಸಿದ ವಿವರಗಳನ್ನು ಒದಗಿಸಲಾಯಿತು.

ಈ ಸಂದರ್ಭದಲ್ಲಿ ವೈದ್ಯಾಧಿಕಾ-ರಿಗಳಾದ ಡಾ. ಶಿವಾನಂದ, ಡಾ. ಪ್ರೀತಾ ಪಾಟೀಲ್, ಡಾ. ಉಮ್ಮೆ ಅಮೇರಾ, ಡಾ. ಶ್ವೇತಾಂಬರಿ, ತಾಲೂಕ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಹಿರೇಮಠ . ಹಾಗೂ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ, ಸಮುದಾಯ ಆರೋಗ್ಯ ಅಧಿಕಾರಿಗಳು, ಪ್ರಾಥ-ಮಿಕ ಆರೋಗ್ಯ ಸುರಕ್ಷತಾಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಆಸ್ಪತ್ರೆಯ ಇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಸೌಜನ್ಯ ಕೊಲೆ ಪ್ರಕರಣ : ಮೂವರು ಪೊಲೀಸ್ ಅಧಿಕಾರಿಗಳ ವಿಚಾರಣೆ

❑ ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಧರ್ಮಸ್ಥಳದ ಸೌಜನ್ಯ ಕೊಲೆ ಪ್ರಕರಣದ ಮರು ತನಿಖೆ ತೀವ್ರಗೊಂಡಿದ್ದು, ಇಂದು ಈ ಪ್ರಕರಣದ ಅಂದಿನ ತನಿಖಾಧಿಕಾ-ರಿಗಳಾಗಿದ್ದ ಮೂವರು ಪೊಲೀಸ್ ಅಧಿಕಾರಿಗಳು ಮಂಗಳೂರಿನ ಎಸ್‌ಐಟಿ ಕಚೇರಿಯಲ್ಲಿ ವಿಚಾರಣೆಗೆ ಹಾಜರಾದರು.ನಕ್ಷೆಗಳನ್ನು ನೋಡಿ ಅಂದಿನ ಬೆಳ್ತಂಗಡಿ ಠಾಣೆ ಸಬ್‌ಇನ್ಸ್ ಪೆಕ್ಟರ್ ಯೋಗೇಶ್, ಸರ್ಕಲ್ ಇನ್?ಸಪೆಕ್ಟರ್ ಬಾಸ್ಕರ್ ರೈ ಹಾಗೂ ಸಿಐಡಿ ಡಿವೈಎಸ್‌ಪಿ ರುದ್ರಮುನಿ ಅವರು ಇಂದು ತಮ ತಮ ಫೈಲ್‌ಗಳೊಂದಿಗೆ ಮಂಗಳೂರಿನ ಹಳೆ ಡಿಸಿ ಕಟ್ಟಡದಲ್ಲಿ ತೆರೆಯಲಾಗಿರುವ ಎಸ್‌ಐಟಿ ಕಚೇರಿಗೆ ಹಾಜರಾದರು.



ಈ ಮೂವರು ಪೊಲೀಸ್ ಅಧಿಕಾರಿಗಳನ್ನು ಪ್ರತ್ಯೇಕವಾಗಿ ವಿಚಾರಣೆ ನಡೆಸಿರುವ ತನಿಖಾಧಿಕಾರಿ ಮನೋಜ್‌ಕುಮಾರ್ ನಾಯಕ್ ಅವರು ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಲವು ಮಾಹಿತಿಗಳನ್ನು ಪಡೆದುಕೊಂಡಿದ್ದಾರೆ. 2012 ರಲ್ಲಿ ಘಟನೆ ನಡೆದ ಆರಂಭಿಕ ದಿನಗಳಲ್ಲಿ ಪ್ರಮುಖ ಸಾಕ್ಷಿಗಳನ್ನು ನಾಶಪಡಿಸಲಾಗಿದೆ ಎಂಬ ಗಂಭೀರ ಆರೋಪಗಳು ಕೇಳಿ ಬಂದಿದ್ದವು. ಈ ಪ್ರಕರಣದ ಮರುತನಿಖೆಗೆ ಸುಪ್ರಿಂ ಕೋರ್ಟ್ ಆದೇಶಿಸಿ ಮೂರು ತಿಂಗಳೊಳಗೆ ವರದಿ ಸಲ್ಲಿಸುವಂತೆ ಸೂಚಿಸಿರುವುದರಿಂದ ಎಸ್‌ಐಟಿ ತನಿಖೆಯನ್ನು ಚುರುಕುಗೊಳಿಸಿದೆ. ಇತ್ತೀಚೆಗಷ್ಟೇ ಸೌಜನ್ಯ ತಾಯಿ ಕುಸುಮಾವತಿ ಅವರ ರಕ್ತದ ಮಾದರಿಯನ್ನು ಸಂಗ್ರಹಿಸಲಾಗಿದೆ.

ವಿಶ್ವ ಪಾರ್ಶ್ವವಾಯು ದಿನಾಚರಣೆ: ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದ ಆರೋಗ್ಯ ಇಲಾಖೆ ಪಾರ್ಶ್ವವಾಯುವಿನ ಲಕ್ಷಣಗಳನ್ನು ಗುರುತಿಸಿ, ತಕ್ಷಣ ಚಿಕಿತ್ಸೆ ಪಡೆಯಿರಿ ಬಾಲಪ್ಪ ನಾಯಕ

❑ ನೈಜ್ಯ ದೆಸೆ ನ್ಯೂಸ್

ಜವಳಗೇರಾ: ವಿಶ್ವ ಪಾರ್ಶ್ವವಾಯು ತಡೆಗಟ್ಟುವ ದಿನಾಚರಣೆಯ ಅಂಗವಾಗಿ ಸಾರ್ವಜನಿಕರಲ್ಲಿ ಪಾರ್ಶ್ವವಾಯು ಕುರಿತು ಅರಿವು ಮೂಡಿಸುವ ಜಾಗೃತಿ ಕಾರ್ಯಕ್ರಮವನ್ನು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರ ನೇತೃತ್ವದಲ್ಲಿ ಸನ್‌ರೈಸ್ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು, ಪಾರ್ಶ್ವವಾಯು ಒಂದು ಗಂಭೀರ ಆರೋಗ್ಯ ಸಮಸ್ಯೆಯಾಗಿದ್ದು, ಇದರ ಲಕ್ಷಣಗಳನ್ನು ಆರಂಭದಲ್ಲಿಯೇ ಗುರುತಿಸಿ ತಕ್ಷಣ ವೈದ್ಯಕೀಯ ಚಿಕಿತ್ಸೆ ಪಡೆಯುವುದು ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು.



ಮುಖ ಒಂದು ಕಡೆ ವಾಲುವುದು, ಒಂದು ಕೈ ಅಥವಾ ಕಾಲಿನಲ್ಲಿ ಹಠಾತ್ ದೌರ್ಬಲ್ಯ ಕಾಣಿಸಿಕೊಳ್ಳುವುದು ಹಾಗೂ ಮಾತನಾಡಲು ತೊಂದರೆಯಾಗುವುದು ಪಾರ್ಶ್ವವಾಯುವಿನ ಪ್ರಮುಖ ಲಕ್ಷಣಗಳಾಗಿವೆ. ಇಂತಹ ಲಕ್ಷಣಗಳು ಕಂಡುಬಂದಲ್ಲಿ ವಿಳಂಬ ಮಾಡದೆ ತಕ್ಷಣ ಆಸ್ಪತ್ರೆಗೆ ಕರೆದೊಯ್ಯಬೇಕು. ಸಮಯಕ್ಕೆ ಸರಿಯಾಗಿ ಚಿಕಿತ್ಸೆ ದೊರೆತರೆ ಜೀವ ಉಳಿಸುವುದರ ಜೊತೆಗೆ ಅಂಗವೈಕಲ್ಯದ ಅಪಾಯವನ್ನೂ ಕಡಿಮೆ ಮಾಡಬಹುದು ಎಂದು ಅವರು ತಿಳಿಸಿದರು.

ನಂತರ ಮಾತನಾಡಿದ ನರ್ಸಿಂಗ್ ವಿದ್ಯಾರ್ಥಿ ಮಲ್ಲಿಕಾರ್ಜುನ ಅವರು ಅಧಿಕ ರಕ್ತದೊತ್ತಡ, ಮಧುಮೇಹ, ಧೂಮಪಾನ, ದೈಹಿಕ ಚಟುವಟಿಕೆಯ ಕೊರತೆ ಹಾಗೂ ಅನಾರೋಗ್ಯಕರ ಜೀವನಶೈಲಿ ಪಾರ್ಶ್ವವಾಯುವಿನ ಅಪಾಯವನ್ನು ಹೆಚ್ಚಿಸಬಹುದು. ಆದ್ದರಿಂದ ನಿಯಮಿತ ಆರೋಗ್ಯ ತಪಾಸಣೆ, ಸಮತೋಲಿತ ಆಹಾರ, ಪ್ರತಿದಿನ ದೈಹಿಕ ಚಟುವಟಿಕೆ ಮತ್ತು ವೈದ್ಯರ ಸಲಹೆಯಂತೆ ಚಿಕಿತ್ಸೆ ಪಡೆಯುವ ಮೂಲಕ ಪಾರ್ಶ್ವವಾಯುವಿನ ಅಪಾಯವನ್ನು ಕಡಿಮೆ ಮಾಡಿಕೊಳ್ಳಬಹುದು ಎಂದು ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು. ಸನ್‌ರೈಸ್ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಪಾರ್ಶ್ವವಾಯುವಿನ ಲಕ್ಷಣಗಳು, ತಡೆಗಟ್ಟುವ ಕ್ರಮಗಳು ಮತ್ತು ತುರ್ತು ಚಿಕಿತ್ಸೆಯ ಮಹತ್ವದ ಕುರಿತು ಜನರಲ್ಲಿ ಜಾಗೃತಿ ಮೂಡಿಸಿದರು. ಪಾರ್ಶ್ವವಾಯುವಿನ ಲಕ್ಷಣಗಳನ್ನು ನಿರ್ಲಕ್ಷಿಸಬೇಡಿ ಸಮಯಕ್ಕೆ ಸರಿಯಾದ ಚಿಕಿತ್ಸೆ ಜೀವ ಉಳಿಸುತ್ತದೆ ಎಂಬ ಸಂದೇಶದೊಂದಿಗೆ ಕಾರ್ಯಕ್ರಮದ ಮೂಲಕ ಸಾರ್ವಜನಿಕರಲ್ಲಿ ಆರೋಗ್ಯ ಜಾಗೃತಿ ಮೂಡಿಸಲಾಯಿತು.

ಮಾಧ್ಯಮಗಳ ಪ್ರಕಟಣೆಗಾಗಿ ಮಾನ್ಯ ಮಾಧ್ಯಮ ಸ್ನೇಹಿತರಲ್ಲಿ ವಿನಂತಿ ಮಾಡಿಕೊಳ್ಳುತ್ತೇವೆ
ಇಂತಿ, ಬಾಲಪ್ಪ ನಾಯಕ
ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ
ಪ್ರಾಥಮಿಕ ಆರೋಗ್ಯ ಕೇಂದ್ರ, ಜವಳಗೇರಾ

ಸಿರವಾರ ತಾಲೂಕಿನಲ್ಲಿ ರಸ್ತೆಗಳ ದುಸ್ಥಿತಿ: ರಾಯಚೂರು-ಲಿಂಗಸೂಗೂರು ಮುಖ್ಯ ರಸ್ತೆಯಲ್ಲಿ ಗುಂಡಿಗಳೇ ಗುಂಡಿ!

ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ ಆಕ್ರೋಶ; ತಕ್ಷಣ ದುರಸ್ತಿಗೆ ಆಗ್ರಹ

❑ ನೈಜ್ಯ ದೆಸೆ ನ್ಯೂಸ್

ಸಿರವಾರ: ಸಿರವಾರ ತಾಲೂಕಿನಲ್ಲಿ ಹಾದುಹೋಗುವ ರಾಯಚೂರು?ಲಿಂಗಸೂಗೂರು ಮುಖ್ಯ ರಸ್ತೆಯ ಹಲವು ಭಾಗಗಳು ಸಂಪೂರ್ಣ ಹದಗೆಟ್ಟಿದ್ದು, ರಸ್ತೆಯಲ್ಲಿ ದೊಡ್ಡ ದೊಡ್ಡ ಗುಂಡಿಗಳು ನಿರ್ಮಾಣವಾಗಿವೆ. ವಾಹನ ಸವಾರರು ಪ್ರತಿನಿತ್ಯ ಜೀವಭಯದಲ್ಲೇ ಸಂಚ-ರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ರಸ್ತೆ ದುರಸ್ತಿಗೆ ಮುಂದಾಗದಿರುವುದಕ್ಕೆ ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸಿರವಾರ ಪಟ್ಟಣದ ಹಳ್ಳಕಡೆಯಿಂದ ಲಿಂಗಸೂಗೂರು ಕಡೆಗೆ ಸಾಗುವ ಈ ಪ್ರಮುಖ ರಸ್ತೆಯಲ್ಲಿ ಹಲವು ಕಡೆ ಡಾಂಬರು ಕಿತ್ತುಹೋಗಿದ್ದು, ರಸ್ತೆ ಮೇಲ್ಮೈ ಸಂಪೂರ್ಣ ಹಾಳಾಗಿದೆ. ರಸ್ತೆಯುದ್ದಕ್ಕೂ ಕಾಣಿಸಿಕೊಳ್ಳುವ ಗುಂಡಿಗಳು ವಾಹನ ಸವಾರರಿಗೆ ಸಂಕಷ್ಟ ತಂದೊಡ್ಡಿವೆ. ದ್ವಿಚಕ್ರ ವಾಹನ ಸವಾರರು ಗುಂಡಿಗಳನ್ನು ತಪ್ಪಿಸಲು ಹೋಗುವಾಗ ನಿಯಂತ್ರಣ ಕಳೆದುಕೊಳ್ಳುವ ಅಪಾಯವಿದ್ದು, ಬಸ್‌ಗಳು ಹಾಗೂ ಇತರ ವಾಹನಗಳ ಸಂಚಾರಕ್ಕೂ ತೊಂದರೆಯಾಗುತ್ತಿದೆ.

ರಸ್ತೆಯ ಕೆಲವು ತಗ್ಗು ಪ್ರದೇಶಗಳಲ್ಲಿ ನೀರು ನಿಂತಿರುವುದರಿಂದ ಗುಂಡಿಗಳ ಆಳ ತಿಳಿಯದೆ ವಾಹನ ಸವಾರರು ತೊಂದರೆ ಅನುಭವಿಸುವಂತಾಗಿದೆ. ರಾತ್ರಿ ವೇಳೆ ಹಾಗೂ ಮಳೆಯ ಸಂದರ್ಭದಲ್ಲಿ ಈ ರಸ್ತೆಯಲ್ಲಿ ಸಂಚರಿಸುವುದು ಮತ್ತಷ್ಟು ಅಪಾಯಕಾರಿಯಾಗುವ ಆತಂಕವಿದೆ. ಪ್ರತಿನಿತ್ಯ ಈ ಮಾರ್ಗವನ್ನು ಬಳಸುವ ಪ್ರಯಾಣಿಕರು, ಉದ್ಯೋಗಿಗಳು ಹಾಗೂ ಸಾರ್ವಜನಿಕರು ಸುಗಮ ಸಂಚಾರವಿಲ್ಲದೆ ಪರದಾಡುವಂತಾಗಿದೆ.



ಪ್ರಮುಖ ರಸ್ತೆಯ ದುಸ್ಥಿತಿಗೆ ಶಾಶ್ವತ ಪರಿಹಾರ ಯಾವಾಗ?

ರಾಯಚೂರು?ಲಿಂಗಸೂಗೂರು ಮುಖ್ಯ ರಸ್ತೆ ಪ್ರಮುಖ ಸಂಪರ್ಕ ಮಾರ್ಗವಾಗಿದ್ದರೂ, ಅದರ ಹದಗೆಟ್ಟ ಸ್ಥಿತಿಯಿಂದ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ. ರಸ್ತೆ ದುರಸ್ತಿ ವಿಳಂಬವಾದರೆ ವಾಹನಗಳ ಸಂಚಾರಕ್ಕೆ ಅಡ್ಡಿಯಾಗುವುದರ ಜೊತೆಗೆ ಅಪಘಾತಗಳ ಅಪಾಯವೂ ಹೆಚ್ಚಾಗಬಹುದು ಎಂಬ ಆತಂಕ ವ್ಯಕ್ತವಾಗಿದೆ. ಹದಗೆಟ್ಟ ರಸ್ತೆಯಿಂದ ವಾಹನಗಳ ನಿರ್ವಹಣಾ ವೆಚ್ಚವೂ ಹೆಚ್ಚಾಗುತ್ತಿದೆ ಎಂದು ವಾಹನ ಸವಾರರು ಅಳಲು ತೋಡಿಕೊಳ್ಳುತ್ತಿದ್ದಾರೆ.

ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ರಸ್ತೆ ಸ್ಥಿತಿಗತಿಗಳನ್ನು ಪರಿಶೀಲಿಸಬೇಕು. ಗುಂಡಿಗಳನ್ನು ತಾತ್ಕಾಲಿಕವಾಗಿ ಮುಚ್ಚುವುದರ ಜೊತೆಗೆ, ರಸ್ತೆಯ ಸ್ಥಿತಿಗೆ ಅನುಗುಣವಾಗಿ ಗುಣಮಟ್ಟದ ದುರಸ್ತಿ ಕಾರ್ಯ ಕೈಗೊಳ್ಳಬೇಕು. ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡಿ ಕಾಮಗಾರಿಯನ್ನು ವಿಳಂಬವಿಲ್ಲದೆ ಆರಂಭಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ಅಪಘಾತಗಳು ಸಂಭವಿಸಿದ ನಂತರ ಕ್ರಮ ಕೈಗೊಳ್ಳುವ ಬದಲು, ಮುನ್ನೆಚ್ಚರಿಕೆ ಕ್ರಮವಾಗಿ ರಸ್ತೆ ದುರಸ್ತಿಗೆ ಅಧಿಕಾರಿಗಳು ಮುಂದಾಗಬೇಕು. ಜನರ ದೈನಂದಿನ ಸಂಚಾರಕ್ಕೆ ಅನುಕೂಲವಾಗುವಂತೆ ಹದಗೆಟ್ಟ ರಸ್ತೆಯನ್ನು ಸರಿಪಡಿಸಿ ಸುರಕ್ಷಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಬೇಕು ಎಂಬುದು ಸಾರ್ವಜನಿಕರ ಪ್ರಮುಖ ಆಗ್ರಹವಾಗಿದೆ.

ಸಿರವಾರದ ರಾಯಚೂರು?ಲಿಂಗಸೂಗೂರು ಮುಖ್ಯ ರಸ್ತೆಯಲ್ಲಿ ಡಾಂಬರು ಕಿತ್ತುಹೋಗಿ ಗುಂಡಿಗಳು ನಿರ್ಮಾಣವಾಗಿರುವ ದೃಶ್ಯ. ರಸ್ತೆಯ ದುಸ್ಥಿತಿಯಿಂದ ವಾಹನ ಸವಾರರು ತೊಂದರೆ ಅನುಭವಿಸುವಂತಾಗಿದೆ.

ನೇಮಕಾತಿ ಪ್ರಕಟಣೆ

KFD ನೇಮಕಾತಿ 2026 – 750 ಅರಣ್ಯ ವೀಕ್ಷಕ (Forest Observer) ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಅಕ್ಟೋಬರ್ 1, 2026

KFD ನೇಮಕಾತಿ 2026: 750 ಅರಣ್ಯ ವೀಕ್ಷಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಅರಣ್ಯ ಇಲಾಖೆಯು (KFD) ಜುಲೈ 2026ರ ಅಧಿಕೃತ ಅಧಿಸೂಚನೆಯ ಮೂಲಕ, ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರಣ್ಯ ವೀಕ್ಷಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ಉದ್ಯೋಗವನ್ನು ಹುಡುಕುತ್ತಿರುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 07ನೇ ಸೆಪ್ಟೆಂಬರ್ 2026ರೊಳಗೆ (ಅಂತಿಮ ದಿನಾಂಕವನ್ನು 30–10–2026ರವರೆಗೆ ವಿಸ್ತರಿಸಲಾಗಿದೆ) ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: aranya.gov.in

ನಾಳೆ (ಅ.31) ಬಾವೂರಿನಲ್ಲಿ 'ಅಣ್ಣನ ಒಡಲು ತಾಯಿಯ ಮಡಿಲು' ನಾಟಕ ಉದ್ಘಾಟನಾ ಸಮಾರಂಭ

ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ತಾಲೂಕಿನ ಬಾವೂರ ಗ್ರಾಮದಲ್ಲಿ ಶ್ರೀ ಗ್ರಾಮದೇವತೆಯ ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀ ಬ್ರಹ್ಮಲಿಂಗೇಶ್ವರ ನಾಟ್ಯಸಂಘದ ವತಿಯಿಂದ ಪ್ರದರ್ಶನಗೊಳ್ಳಲಿರುವ 'ಅಣ್ಣನ ಒಡಲು ತಾಯಿಯ ಮಡಿಲು' ಎಂಬ ಸಾಮಾಜಿಕ ನಾಟಕದ ಉದ್ಘಾಟನಾ ಸಮಾರಂಭ ಅ.31ರ ಶನಿವಾರ ರಾತ್ರಿ 8 ಗಂಟೆಗೆ ಜರುಗಲಿದೆ.

ಶ್ರೀ ಖಾಸ್ಗತೇಶ್ವರ ಮಠದ ಪರಮಪೂಜ್ಯ ಸಿದ್ದಲಿಂಗ ದೇವರು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಲಿದ್ದು, ಕೆ-ಎಸ್‌ಡಿಎಲ್ ಅಧ್ಯಕ್ಷ ಹಾಗೂ ಶಾಸಕ ಸಿ.ಎಸ್. ನಾಡಗೌಡ ಅಪ್ಪಾಜಿ ಮತ್ತು ಮಾಜಿ ಶಾಸಕ ಎ.ಎಸ್. ಪಾಟೀಲ ನಡಹಳ್ಳಿ ಅವರು ನಾಟಕವನ್ನು ಉದ್ಘಾಟಿಸಲಿದ್ದಾರೆ. ಗ್ರಾಮದ ಗಣ್ಯರಾದ ಆನಂದರಾಜ ಎಂ. ದೇಶಮುಖ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಉಮೇಶರಾಜ ಎಂ. ದೇಶಮುಖ ಅವರು ಗೌರವಾಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬಿಜೆಪಿ ಜಿಲ್ಲಾ ಮಾಜಿ ಅಧ್ಯಕ್ಷ ಆರ್.ಎಸ್. ಪಾಟೀಲ (ಕೂಚಬಾಳ), ಶ್ರೀ ಸಂಗಮೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎಚ್.ಎಸ್. ಪಾಟೀಲ, ಕೆಪಿಸಿಸಿ ರಾಜ್ಯ ಕಾರ್ಯದರ್ಶಿ ಡಾ. ಪ್ರಭುಗೌಡ ಲಿಂಗದಳ್ಳಿ, ಪಿಎಸ್‌ಐ ಜ್ಯೋತಿ ಕೋತ, ಸಮಾಜ ಸೇವಕ ಸಿ.ಬಿ. ಅಸ್ಕಿ, ಜೆಡಿಎಸ್ ತಾಲೂಕು ಅಧ್ಯಕ್ಷ ಮಡುಸೌಕಾರ ಬಿರಾದಾರ, ಪುರಸಭೆ ಮಾಜಿ ಸದಸ್ಯ ಪ್ರಭುಗೌಡ ಮದರಕಲ್ಲ, ಕಾಂಗ್ರೆಸ್ ಮುಖಂಡ ಎಚ್.ಎಂ. ನಾಯಕ್, ಕಾಂಗ್ರೆಸ್ ಯುವ ಮುಖಂಡ ವಿರೇಶಗೌಡ ಪಾಟೀಲ (ಬಾಗೇವಾಡಿ) ಹಾಗೂ ಪ್ರಥಮ ದರ್ಜೆ ಗುತ್ತಿಗೆದಾರ ನಿಂಗನಗೌಡ ಬಿರಾದಾರ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಗ್ರಾಮದ ಗಣ್ಯರು ಭಾಗವಹಿಸಲಿದ್ದಾರೆ. ಗ್ರಾಮದೇವತೆಯ ಜಾತ್ರಾ ಮಹೋತ್ಸವದ ಸಂಭ್ರಮಕ್ಕೆ ಮತ್ತಷ್ಟು ಮೆರುಗು ನೀಡಲಿರುವ ಈ ನಾಟಕದ ಉದ್ಘಾಟನಾ ಸಮಾರಂಭದಲ್ಲಿ ಸಾರ್ವಜನಿಕರು ಹಾಗೂ ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಾತ್ರಾ ಸಮಿತಿಯ ಸದಸ್ಯರು ಹಾಗೂ ಸದ್ಭಕ್ತ ಮಂಡಳಿಯವರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಕೋಟ್ಯಂತರ ಕನ್ನಡಿಗರ 'ರಾಜರತ್ನ'ನಿಗೆ ಕಂಪ್ಲಿಯಲ್ಲಿ ನಮನ: ಚಂದ್ರಕಲಾ ಚಿತ್ರಮಂದಿರದಲ್ಲಿ ಅಪ್ಪು ಪುಣ್ಯಸ್ಮರಣೆ ಉದ್ಘಾಟಿಸಿ ಭಾವುಕರಾದ ಹೊನ್ನಳ್ಳಿ ಸುರೇಶ್

ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಕನ್ನಡ ನೆಲದ ಹೆಮ್ಮೆ, ಕರುನಾಡಿನ ಪ್ರೀತಿಯ 'ಅಪ್ಪು' ಡಾ. ಪುನೀತ್ ರಾಜ್‌ಕುಮಾರ್ ಅವರ ಪುಣ್ಯಸ್ಮರಣೆ ಅಂಗವಾಗಿ ಕಂಪ್ಲಿ ಪಟ್ಟಣದ ಪ್ರಸಿದ್ಧ ಚಂದ್ರಕಲಾ ಚಿತ್ರಮಂದಿರದಲ್ಲಿ ಇಂದು ಭಕ್ತಿ ಮತ್ತು ಪ್ರೀತಿಯ ಸಾಗರವೇ ಹರಿದುಬಂದಿತ್ತು. ಅಪ್ಪು ಅಭಿಮಾನಿ ಬಳಗದ ಸಾರಥಿ, ಪ್ರಮುಖರಾದ ಹೊನ್ನಳ್ಳಿ ಸುರೇಶ್ ಅವರ ನೇತೃತ್ವದಲ್ಲಿ ಅತ್ಯಂತ ಅರ್ಥಪೂರ್ಣ ಶ್ರದ್ಧಾಂಜಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.



ಚಿತ್ರಮಂದಿರದ ಆವರಣದಲ್ಲಿದ್ದ ಅಪ್ಪು ಅವರ ಭಾವಚಿತ್ರಕ್ಕೆ ಹೂವಿನ ಹಾರ ಹಾಕಿ, ದೀಪ ಬೆಳಗಿ, ಕಣ್ಣೀರ ನಮನ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಅಪ್ಪು ಕೇವಲ ನಟನಲ್ಲ, ಅವರೊಬ್ಬ ಚೇತನ: ಹೊನ್ನಳ್ಳಿ ಸುರೇಶ್ ಭಾವುಕ ನುಡಿ ವೇದಿಕೆಯಲ್ಲಿ ಅಪ್ಪಟ ಅಭಿಮಾನಿಯಂತೆ ಭಾವುಕರಾಗಿ ಮಾತನಾಡಿದ ಹೊನ್ನಳ್ಳಿ ಸುರೇಶ್ ಅವರು, "ಪುನೀತ್ ರಾಜ್‌ಕುಮಾರ್ ಅಂ-ದರೆ ಕೇವಲ ಬೆಳ್ಳಿತೆರೆಯ ನಟನಲ್ಲ; ಅವರೊಬ್ಬ ಜೀವಂತ ಆದರ್ಶ. ಕೋಟ್ಯಂತರ ರೂಪಾಯಿ ಸಂಪಾದನೆಗಿಂತ ಕೋಟ್ಯಂತರ ಹೃದಯಗಳನ್ನು ಗೆಲ್ಲುವುದು ಹೇಗೆ ಎಂಬುದನ್ನು ಅವರು ತಮ್ಮ ಬದುಕಿನ ಮೂಲಕ ತೋರಿಸಿಕೊಟ್ಟಿದ್ದಾರೆ. ಅವರು ಮಾಡಿರುವ ಅನಾಥಾಶ್ರಮಗಳು, ಉಚಿತ ಶಾಲೆಗಳು ಮತ್ತು ಗೋಶಾಲೆಗಳ ಸೇವೆ ಇಂದಿಗೂ ದಾರಿದೀಪವಾಗಿದೆ. ಅವರು ನಮ್ಮನ್ನು ಅಗಲಿರಬಹುದು, ಆದ-'ರೆ ಅವರ ನಗು ಮತ್ತು ಆದರ್ಶಗಳು ಪ್ರತಿ ಕನ್ನಡಿಗನ ಉಸಿರಿನಲ್ಲಿ ಸದಾ ಜೀವಂತ," ಎಂದು ಅಭಿಮಾನದ ನುಡಿಗಳನ್ನಾಡಿದರು.

ಅಪ್ಪು ಸ್ಮರಣೆಯ ಈ ಸಂದರ್ಭದಲ್ಲಿ ಚಿತ್ರಮಂದಿರದ ಆವರಣದಲ್ಲಿ ನೆರೆದಿದ್ದ ನೂರಾರು ಅಭಿಮಾನಿಗಳ ಕಣ್ಣಾಲಿಗಳು ತೇವವಾಗಿದ್ದವು. ಟಾಕೀಸ್ ನ ಮ್ಯಾನೇಜರ್ ಸೋಫಿಸಾಬ್, ಅಭಿಮಾನಿಗಳಾದ ಕೃಷ್ಣ, ಕೊಟ್ರಪ್ಪ, ರಾಜ, ಸುಮಲತಾ, ರಾಜಮ್ಮ ಸಾರ್ವಜನಿಕರುಸೇರಿದಂತೆ ಇತರರಿದ್ದರು.

ಸಕ್ರಿಯವಾಗಿ ಭಾಗವಹಿಸಿ, ತಮಗಿರುವ ನೆಚ್ಚಿನ ನಟನ ಮೇಲಿನ ಅಪಾರ ಪ್ರೀತಿಯನ್ನು ತೋರ್ಪಡಿಸಿದರು. ಇಡೀ ಕಾರ್ಯಕ್ರಮವು ಕಂಪ್ಲಿ ಪಟ್ಟಣದಲ್ಲಿ ಅಪ್ಪು ಅವರ ಮೇಲಿರುವ ಅಚಲವಾದ ಗೌರವಕ್ಕೆ ಸಾಕ್ಷಿಯಾಯಿತು.

ಯೋಗ ಕ್ಷೇತ್ರದಲ್ಲಿ ಅನನ್ಯ ಸೇವೆ: ಕಂಪ್ಲಿಯ ಯೋಗಪಟು ಡಿ.ಮೌನೇಶರವರಿಗೆ ಬೆಂಗಳೂರಿನಲ್ಲಿ 'ಯೋಗ ರತ್ನ' ಪ್ರಶಸ್ತಿ ಪ್ರದಾನ

ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಯೋಗ ಕ್ಷೇತ್ರದಲ್ಲಿ ಸಲ್ಲಿಸುತ್ತಾ ಬಂದಿರುವ ನಿರಂತರ ಹಾಗೂ ಸಮಾಜಮುಖಿ ಸೇವೆಯನ್ನು ಗುರುತಿಸಿ ಕಂಪ್ಲಿ ತಾಲೂಕಿನ ಪ್ರಸಿದ್ಧ ಯೋಗಪಟು ಡಿ.ಮೌನೇಶ್ ಅವರಿಗೆ ಬೆಂಗಳೂರಿನಲ್ಲಿ 'ಯೋಗ ರತ್ನ' ಪ್ರಶಸ್ತಿ ನೀಡಿ ಅತ್ಯಂತ ವಿಜೃಂಭಣೆಯಿಂದ ಗೌರವಿಸಲಾಯಿತು.



ಬೆಂಗಳೂರಿನಲ್ಲಿ ಇತ್ತೀಚೆಗೆ ರೋಟರಿ ಬೆಂಗಳೂರು ಗ್ಲೋಬಲ್ ಯೋಗ ಸಂಸ್ಥೆಯ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಯೋಗ ಶಿಕ್ಷಕರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಈ ಪ್ರತಿಷ್ಠಿತ ಪುರಸ್ಕಾರವನ್ನು ಪ್ರದಾನ ಮಾಡಲಾಯಿತು. ದೇಶದ ವಿವಿಧೆಡೆಯಿಂದ ಬಂದಿದ್ದ ಗಣ್ಯರು ಹಾಗೂ ಯೋಗ ಸಾಧಕರ ಸಮ್ಮುಖದಲ್ಲಿ ಡಿ.ಮೌನೇಶ್ ಅವರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ನಿರಂತರ ಸಮಾಜಮುಖಿ ಸೇವೆಗೆ ಸಂದ ಗೌರಾವ: ಡಿ.ಮೌನೇಶ್ ಅವರು ಕಂಪ್ಲಿ ತಾಲೂಕು ಪತಂಜಲಿ ಯೋಗ ಸಮಿತಿಯ ಪ್ರಭಾ-ರಿಯಾಗಿ ಕಾರ್ಯನಿರ್ವಹಿಸುತ್ತಾ, ಗ್ರಾಮೀಣ ಹಾಗೂ ನಗರ ಪ್ರದೇಶದ ಜನರಲ್ಲಿ ಯೋಗದ ಬಗ್ಗೆ ಜಾಗೃತಿ ಮೂಡಿಸುತ್ತಿದ್ದಾರೆ. ಉಚಿತ ಯೋಗ ಶಿಬಿರಗಳ ಮೂಲಕ ನೂರಾರು ಜನ-ರಿಗೆ ಆರೋಗ್ಯದ ಪಾಠ ಹೇಳಿಕೊಡುತ್ತಿರುವ ಇವರು, ವಿಶ್ವಕರ್ಮ ಸಮಾಜದ ಸಮಾಜದ ಏಳಿಗೆಗಾಗಿ ಶ್ರಮಿಸುತ್ತಿದ್ದಾರೆ.

ಯೋಗ ಹಾಗೂ ಸಂಘಟನಾ ರಂಗದಲ್ಲಿ ಅವರು ಸಲ್ಲಿಸಿದ ಈ ಬಹುಮುಖಿ ಸೇವೆಯನ್ನು ಸೂಕ್ತವಾಗಿ ಪರಿಗಣಿಸಿದ ರೋಟರಿ ಬೆಂಗಳೂರು ಗ್ಲೋಬಲ್ ಯೋಗ ಸಂಸ್ಥೆಯು ಈ ಬಾರಿಯ 'ಯೋಗ ರತ್ನ' ಪ್ರಶಸ್ತಿಗೆ ಇವರನ್ನು ಆಯ್ಕೆ ಮಾಡಿದೆ. ಯೋಗ ಸೇವಕರಿಗೆ ಸ್ಫೂರ್ತಿಯಾಗಲಿ-ಡಿ.ಮೌನೇಶ್‌ಆಶಯ: ಪ್ರಶಸ್ತಿಯನ್ನು ಸ್ವೀಕರಿಸಿ ಮಾತನಾಡಿದ ಯೋಗಪಟು ಡಿ.ಮೌನೇಶ್, "ನನ್ನ ಜೀವನದುದ್ದಕ್ಕೂ ಆರೋಗ್ಯವಂತ ಸಮಾಜ ನಿರ್ಮಾಣದ ಗುರಿಯೊಂದಿಗೆ ಯೋಗ ಸೇರಿದಂತೆ ನಾನಾ ರಂಗಗಳಲ್ಲಿ ಸಮಾಜಮುಖಿ ಕೆಲಸಗಳನ್ನು ಮಾಡಿಕೊಂಡು ಬರಲಾಗಿದೆ. ನಾವು ಮಾಡುವ ನಿಸ್ವಾರ್ಥ ಸೇವೆಯನ್ನು ಗುರುತಿಸಿ, ಇಂದು ಈ ಜವಾಬ್ದಾರಿಯುತ 'ಯೋಗ ರತ್ನ' ಪ್ರಶಸ್ತಿ ನೀಡಿರುವುದು ನನ್ನಲ್ಲಿ ಮತ್ತಷ್ಟು ಹುರುಪು ಮೂಡಿಸಿದೆ ಮತ್ತು ಸಮಾಜದ ಕಡೆಗಿನ ನನ್ನ ಜವಾಬ್ದಾರಿಯನ್ನು ಹೆಚ್ಚಿಸಿದೆ.

ನನ್ನಂತೆ ಸಮಾಜದ ಮೂಲೆ ಮೂಲೆಗಳಲ್ಲಿ ಕಾಯಕ ನಿರತರಾಗಿರುವ ಇನ್ನಷ್ಟು ಹಿರಿಯ-ಕಿರಿಯ ಸೇವಕರಿಗೆ ಭವಿಷ್ಯದಲ್ಲಿ ಇಂತಹ ಉನ್ನತ ಪ್ರಶಸ್ತಿಗಳು ಮತ್ತು ಗೌರವಗಳು ಲಭಿಸುವಂತಾಗಲಿ" ಎಂದು ಸಂತಸ ಹಂಚಿಕೊಳ್ಳುತ್ತಾ ತಮ್ಮ ಆಶಯ ವ್ಯಕ್ತಪಡಿಸಿದರು. ಸಮಾರಂಭದಲ್ಲಿ ರೋಟರಿ ಸಂಸ್ಥೆಯ ಪದಾಧಿಕಾರಿಗಳು, ಯೋಗ ಗುರುಗಳು ಹಾಗೂ ವಿಶ್ವಕರ್ಮ ಸಮಾಜದ ಮುಖಂಡರು ಉಪಸ್ಥಿತರಿದ್ದು, ಡಿ.ಮೌನೇಶ್ ಅವರ ಸಾಧನೆಯನ್ನು ಮುಕ್ತಕಂಠದಿಂದ ಶ್ಲಾಘಿಸಿದರು. ಕಂಪ್ಲಿ ತಾಲೂಕಿನ ಯೋಗಪಟುವಿಗೆ ರಾಜ್ಯ ಮಟ್ಟದಲ್ಲಿ ಗೌರವ ದೊರೆತಿರುವುದಕ್ಕೆ ಸ್ಥಳೀಯ ಸಾರ್ವಜನಿಕರು ಮತ್ತು ಪತಂಜಲಿ ಯೋಗ ಸಮಿತಿಯ ಸದಸ್ಯರು ಹರ್ಷ ವ್ಯಕ್ತಪಡಿಸಿದ್ದಾರೆ.

ಪಡಿತರ ಕಳ್ಳ ಸಾಗಣೆ : 3 ತಿಂಗಳಲ್ಲಿ 17.78 ಲಕ್ಷ ಕೆಜಿ ಅಕ್ಕಿ ವಶ

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಆಹಾರ, ಸಾರ್ವಜನಿಕ ವಿತರಣೆ ಹಾಗೂ ಗ್ರಾಹಕ ವ್ಯವಹಾರಗಳ ಖಾತೆ ಅಧಿಕಾ-ರಿಗಳು ಪಡಿತರ ಕಳ್ಳ ಸಾಗಾಣಿಕೆದಾರರ ಮೇಲಿನ ದಾಳಿ ಮುಂದುವರೆಸಿದ್ದು, ಕಳೆದ ಮೂರು ತಿಂಗಳಿನಲ್ಲಿ ಸುಮಾರು 17.78 ಲಕ್ಷ ಕೆಜಿ ಪಡಿತರ ಅಕ್ಕಿ ಮತ್ತಿತರ ಕಾಳು ಪದಾರ್ಥಗಳನ್ನು ವಶಪಡಿಸಿಕೊಂಡಿದ್ದಾರೆ.



ಆಹಾರ, ಸಾರ್ವಜನಿಕ ವಿತರಣೆ ಹಾಗೂ ಗ್ರಾಹಕ ವ್ಯವಹಾರಗಳ ಸಚಿವ ರಿಜ್ವಾನ್ ಅರ್ಷದ್ ಅವರ ನಿರ್ದೇಶನದ ಮೇರೆಗೆ ಕಳೆದ ಅಗಸ್ಟ್ 1 ರಿಂದ ಇಲಾಖೆ ಅಧಿಕಾರಿಗಳು ಪಡಿತರ ಸಾಗಣೆ ವಾಹನಗಳ ನಿರಂತರ ತಪಾಸಣೆ ಹಾಗೂ ಖಾಸಗಿ ಗೋಡೌನ್ ಗಳ ಮೇಲೆ ದಾಳಿ ನಡೆಸಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಕ್ಕಿ, ಗೋಧಿ, ರಾಗಿ, ಹಾಗೂ ಇತರೆ ಬೇಳೆಕಾಳು ಸೇರಿದಂತೆ 17.78 ಲಕ್ಷ ಕೆಜಿ ಪಡಿತರ ಧಾನ್ಯಗಳನ್ನು ವಶಪಡಿಸಿಕೊಂಡಿದ್ದಾರೆ. ಬೆಳಗಾವಿ ಜಿಲ್ಲೆಯೊಂದರಲ್ಲಿಯೇ 5ಲಕ್ಷ ಕೆ-ಜಿಗೂ ಹೆಚ್ಚು ಪಡಿತರ ವಶಪಡಿಸಿಕೊಳ್ಳಲಾಗಿದೆ. ಅದೇ ರೀತಿ ಕೋಲಾರ ಜಿಲ್ಲೆಯಲ್ಲಿ 3.5 ಲಕ್ಷ ಕೆಜಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ತಲಾ ಒಂದು ಲಕ್ಷಕ್ಕೂ ಹೆಚ್ಚು ಕೆಜಿ ಅಕ್ಕಿ ಮತ್ತು ಇತರ ಧಾನ್ಯಗಳನ್ನು ವಶಕ್ಕೆ ಪಡೆಯಲಾಗಿದೆ.

ಈ ದಾಳಿ ಹಾಗೂ ತಪಾಸಣೆಗೆ ಸಂಬಂಧಿಸಿದಂತೆ ಒಟ್ಟು 238 ಎಫ್‌ಐಆರ್‌ಗಳನ್ನು ರಾಜ್ಯದ ವಿವಿಧ ಪೋಲಿಸ್ ಠಾಣೆಗಳಲ್ಲಿ ದಾಖಲಿಸಿ, 215 ಜನರನ್ನು ಬಂಧಿಸಲಾಗಿದೆ. ಪಡಿತರ ಕಳ್ಳ ಸಾಗಣೆಗೆ ಬಳಸಲಾಗುತ್ತಿದ್ದ 156 ವಾಹನಗಳನ್ನೂ ಜಪ್ತಿ ಮಾಡಲಾಗಿದೆ. ಜೊತೆಗೆ ಅಡುಗೆ ಅನಿಲ (ಸಿಲಿಂಡರ್) ಹಾಗೂ ಪೆಟ್ರೋಲ್/ಡೀಸೆಲ್ ಅಕ್ರಮ ದಾಸ್ತಾನುದಾರರ ಮೇಲೂ ದಾಳಿ ಮುಂದುವರೆದಿದ್ದು, ಕಳೆದ ಮೂರು ತಿಂಗಳಿನಲ್ಲಿ 14,250 ಲೀಟರ್ ಪೆಟ್ರೋಲ್ ಹಾಗೂ 1,492 ಗ್ಯಾಸ್ ಸಿಲಿಂಡರ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ.

ವಶಪಡಿಸಿಕೊಂಡ ಪಡಿತರ ದಾನ್ಯ ಹಾಗೂ ಸಿಲಿಂಡರ್ ಹಾಗೂ ಪೆಟ್ರೋಲ್‌ಗಳ ಒಟ್ಟು ಬೆಲೆ ಸುಮಾರು 10 ಕೋಟಿ ರೂಪಾಯಿಗಳು.ಸಚಿವ ರಿಜ್ವಾನ್ ಅರ್ಷದ್ ಅವರು ಪಡಿತರ ಅಕ್ಕಿ ಕಳ್ಳ ಸಾಗಾಣಿಕೆ ಜಾಲದ ಮೇಲಿನ ದಾಳಿಗಳನ್ನು ಮುಂದುವರೆಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದು ಬಡವರಿಗಾಗಿ ಮೀಸಲಿರುವ ಅಕ್ಕಿ ಮತ್ತಿತರ ಪಡಿತರ ದಾನ್ಯಗಳ ಕಳ್ಳತನವನ್ನು ಯಾವುದೇ ಕಾರಣಕ್ಕೂ ಸಹಿಸಲಾಗದು ಎಂದಿದ್ದಾರೆ. ರಾಜ್ಯಾದ್ಯಂತ ಬರಗಾಲವಿದ್ದು ಬಡವರು ತೊಂದರೆಯಲ್ಲಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಅವರಿಗಾಗಿ ಮೀಸಲಿರುವ ಅಕ್ಕಿಯನ್ನು ಬೇರೆಯವರು ವ್ಯಾಪಾರಕ್ಕಾಗಿ, ಲಾಭಕ್ಕಾಗಿ ಬಳಸಿಕೊಳ್ಳುವುದು ಅಕ್ಷಮ್ಯ ಅಪರಾಧ. ನಮ ಸರಕಾರ ಇದಕ್ಕೆ ಅವಕಾಶ ಕೊಡುವುದಿಲ್ಲ, ಎಂದು ಸಚಿವರು ಹೇಳಿದ್ದಾರೆ.

ಕಳೆದ ಕೆಲವು ದಿನಗಳಿಂದ ಅಕ್ಕಿಯ ಬೆಲೆ ಏರಿಕೆಯಾಗುತ್ತಿದ್ದು, ಕೆಲವು ಶಕ್ತಿಗಳು ಪರಿಸ್ಥಿತಿಯ ಲಾಭ ಪಡೆದು ಅಕ್ಕಿಯ ಅಕ್ರಮ ದಾಸ್ತಾನು ಹಾಗೂ ಕಳ್ಳಸಂತೆಯಲ್ಲಿ ಅಕ್ಕಿ ಮಾರಾಟ ಮಾಡಲು ಯತ್ನಿಸಿದರೆ ಅಂಥವರ ಮೇಲೂ ಇಲಾಖೆ ಕ್ರಮ ಕೈಗೊಳ್ಳಲಿದೆ ಎಂದು ಎಚ್ಚರಿಸಿದರು.

ನವೋದಯ ಕಾಲೇಜ್ ಆಫ್ ನರ್ಸಿಂಗ್‌ನಲ್ಲಿ ವಯೋವೃದ್ಧರ ಆರೈಕೆ ಕುರಿತು ಪೋಸ್ಟರ್ ಮೇಕಿಂಗ್ ಸ್ಪರ್ಧೆ: 22 ತಂಡಗಳಿಂದ ಜಾಗೃತಿ ಸಂದೇಶ "ತಂದೆ-ತಾಯಿ ನಮ್ಮ ಆದ್ಯತೆ"

ನೈಜ್ಯ ದೆಸೆ ನ್ಯೂಸ್

ರಾಯಚೂರು: ವಯೋವೃದ್ಧರ ಆರೋಗ್ಯ, ಸುರಕ್ಷತೆ, ಮಾನಸಿಕ ನೆಮ್ಮದಿ ಹಾಗೂ ಗೌರವಯುತ ಜೀವನದ ಮಹತ್ವವನ್ನು ಸಮಾಜಕ್ಕೆ ತಿಳಿಸುವ ಉದ್ದೇಶದಿಂದ ನವೋದಯ ಕಾಲೇಜ್ ಆಫ್ ನರ್ಸಿಂಗ್‌ನಲ್ಲಿ ಇಂದು "ವಯೋವೃದ್ಧರ ಆರೈಕೆ (ಇಟಜಜಿಡಿ-ಟಥಿ ಅಚಿಡಿಜ)" ಎಂಬ ವಿಷಯದಡಿ ಪೋಸ್ಟರ್ ಮೇಕಿಂಗ್ ಸ್ಪರ್ಧೆಯನ್ನು ಆಯೋಜಿಸಲಾಯಿತು. ಹಿರಿಯ ನಾಗರಿಕರ ಬಗ್ಗೆ ಪ್ರೀತಿ, ಕಾಳಜಿ, ಗೌರವ ಮತ್ತು ಮಾನವೀಯ ಮೌಲ್ಯಗಳನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವ ಉದ್ದೇಶದಿಂದ ನಡೆದ ಈ ಕಾರ್ಯಕ್ರಮದಲ್ಲಿ ಸುಮಾರು 22 ತಂಡಗಳು ಭಾಗವಹಿಸಿ ತಮ್ಮ ಸೃಜನಶೀಲತೆಯನ್ನು ಪ್ರದರ್ಶಿಸಿದವು.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ರಾಧಾ ಮೇಡಂ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಡಾ. ದ್ಯಾಮನಗೌಡ್ರ, ಪ್ರೊಫೆಸರ್ ಪೈಲೆಟ್ ಮೇಡಂ ಹಾಗೂ ರಾಕಿ ಸರ್ಕಾರ್ ಅವರು ಉಪಸ್ಥಿತರಿದ್ದು, ಕಾರ್ಯಕ್ರಮದ ಆಶಯಕ್ಕೆ ಮಾರ್ಗದರ್ಶನ ನೀಡಿದರು. ವಯೋವೃದ್ಧರ ಆರೈಕೆ: ಕುಟುಂಬದಿಂದ ಸಮಾಜದವರೆಗೆ ಎಲ್ಲರ ಜವಾಬ್ದಾರಿ ಇಂದಿನ ವೇಗದ ಜೀವನಶೈಲಿ, ಬದಲಾಗುತ್ತಿರುವ ಕುಟುಂಬ ವ್ಯವಸ್ಥೆ ಮತ್ತು ಹೆಚ್ಚುತ್ತಿರುವ ವೃದ್ಧಾಪ್ಯದ ಸವಾಲುಗಳ ನಡುವೆ ಹಿರಿಯ ನಾಗರಿಕರ ಆರೈಕೆ ಅತ್ಯಂತ ಮಹತ್ವದ ಸಾಮಾಜಿಕ ಹಾಗೂ ಆರೋಗ್ಯ ಕ್ಷೇತ್ರದ ಜವಾಬ್ದಾರಿಯಾಗಿದೆ. ವಯೋವೃದ್ಧ-ರಿಗೆ ಕೇವಲ ಔಷಧೋಪಚಾರ ಮತ್ತು ದೈಹಿಕ ಆರೈಕೆ ಮಾತ್ರವಲ್ಲದೆ, ಪ್ರೀತಿ, ಆತ್ಮೀಯತೆ, ಮಾನಸಿಕ ಬೆಂಬಲ, ಸಾಮಾಜಿಕ ಭದ್ರತೆ ಮತ್ತು ಗೌರವಯುತ ಬದುಕು ಕೂಡ ಅಗತ್ಯವಾಗಿದೆ ಎಂಬ ಸಂದೇಶವನ್ನು ಈ ಕಾರ್ಯಕ್ರಮ ಸಾರಿತು. ಸ್ಪರ್ಧೆಯಲ್ಲಿ ಭಾಗವಹಿಸಿದ 22 ತಂಡಗಳು ವಯೋವೃದ್ಧರ ಆರೈಕೆಯ ವಿವಿಧ ಆಯಾಮಗಳನ್ನು ತಮ್ಮ ಪೋಸ್ಟರ್‌ಗಳ ಮೂಲಕ ಪ್ರಸ್ತುತಪಡಿಸಿದವು. ವಯಸ್ಸಾದವರ ದೈಹಿಕ ಆರೋಗ್ಯದ ಸಂರಕ್ಷಣೆ, ಸಮತೋಲಿತ ಪೌಷ್ಟಿಕ ಆಹಾರ, ನಿಯಮಿತ ಆರೋಗ್ಯ ತಪಾಸಣೆ, ದೀರ್ಘಕಾಲೀನ ಕಾಯಿಲೆಗಳ ನಿರ್ವಹಣೆ, ಮಾನಸಿಕ ಆರೋಗ್ಯದ ಕಾಳಜಿ, ಕುಟುಂಬದ ಸದಸ್ಯರ ಬೆಂಬಲ ಮತ್ತು ಹಿರಿಯ ನಾಗರಿಕರ ಹಕ್ಕುಗಳಂತಹ ವಿಷಯಗಳಿಗೆ ಪ್ರಾಮುಖ್ಯತೆ ನೀಡಲಾಯಿತು.

ವಿದ್ಯಾರ್ಥಿಗಳು ತಮ್ಮ ಪೋಸ್ಟರ್‌ಗಳಲ್ಲಿ ಹಿರಿಯರ ಜೀವನಾನುಭವ, ಕುಟುಂಬಕ್ಕಾಗಿ ಅವರು ಮಾಡಿದ ತ್ಯಾಗ, ಮಕ್ಕಳ ಭವಿಷ್ಯಕ್ಕಾಗಿ ಸಲ್ಲಿಸಿದ ಸೇವೆ ಹಾಗೂ ಸಮಾಜದ ಅಭಿವೃದ್ಧಿಗೆ ನೀಡಿದ ಕೊಡುಗೆಗಳನ್ನು ಮನಮುಟ್ಟುವ ರೀತಿಯಲ್ಲಿ ಚಿತ್ರಿಸಿದರು. ಬಣ್ಣಗಳು, ಚಿತ್ರಗಳು, ಘೋಷವಾಕ್ಯಗಳು ಮತ್ತು ಅರ್ಥಪೂರ್ಣ ಸಂದೇಶಗಳ ಮೂಲಕ ವಯೋವೃದ್ಧರ ಮೇಲಿನ ಪ್ರೀತಿ ಮತ್ತು ಗೌರವವನ್ನು ಅಭಿವ್ಯಕ್ತಿಸಿದರು. ಬಾಲ್ಯದಲ್ಲಿ ನಮ್ಮ ಪ್ರತಿಯೊಂದು ಅಗತ್ಯವನ್ನು ಗುರುತಿಸಿ ಪೂರೈಸಿದ ತಂದೆ-ತಾಯಿಯ-ರಿಗೆ ವೃದ್ಧಾಪ್ಯದಲ್ಲಿ ಪ್ರೀತಿ, ಗೌರವ, ಭದ್ರತೆ ಮತ್ತು ಮಾನಸಿಕ ನೆಮ್ಮದಿಯನ್ನು ನೀಡುವುದು ನಮ್ಮ ಆದ್ಯತೆಯಾಗಬೇಕು. ಇಂದಿನ ಆದ-ುನಿಕ ಜೀವನಶೈಲಿಯಲ್ಲಿ ಉದ್ಯೋಗ, ಹಣ ಸಂಪಾದನೆ ಮತ್ತು ವೈಯಕ್ತಿಕ ಸಾಧನೆಗಳಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡುವ ಸಂದರ್ಭದಲ್ಲಿ, ನಮ್ಮ ಬದುಕಿನ ಅಡಿಪಾಯವಾದ ತಂದೆ-ತಾಯಿಯನ್ನು ಮರೆಯಬಾರದು ಎಂಬ ಸಂದೇಶವು ವಿಶೇಷ ಮಹತ್ವವನ್ನು ಪಡೆದುಕೊಳ್ಳುತ್ತದೆ.

"ನಾವು ಚಿಕ್ಕವರಿದ್ದಾಗ ನಮ್ಮ ಕೈಹಿಡಿದು ನಡೆಯಲು ಕಲಿಸಿದ ತಂದೆ-ತಾಯಿಯರು ವಯಸ್ಸಾದಾಗ ಅವರ ಕೈಹಿಡಿದು ನಡೆಸುವುದು ನಮ್ಮ ಜವಾಬ್ದಾರಿ." ತಂದೆ-ತಾಯಿಯ ಆರೋಗ್ಯದ ಕಾಳಜಿ ವಹಿಸುವುದು, ಅವರೊಂದಿಗೆ ಸಮಯ ಕಳೆಯುವುದು, ಅವರ ಮಾತುಗಳನ್ನು ಆಲಿಸುವುದು, ಅವರ ಭಾವನೆಗಳಿಗೆ ಗೌರವ ನೀಡುವುದು ಮತ್ತು ಏಕಾಂಗಿತನವನ್ನು ದೂರಮಾಡುವುದು ಮಕ್ಕಳ ಕರ್ತವ್ಯವಾಗಿದೆ. ವಯೋವೃದ್ಧರ ಆರೈಕೆ ಎಂದರೆ ಕೇವಲ ಆಹಾರ, ಔಷಧಿ ಮತ್ತು ಸೌಲಭ್ಯಗಳನ್ನು ಒದಗಿಸುವುದಲ್ಲ; ಅವರ ಮನಸ್ಸಿಗೆ ಸಂತೋಷ ನೀಡುವುದು, ಆತ್ಮವಿಶ್ವಾಸ ತುಂಬುವುದು ಮತ್ತು ಕುಟುಂಬದಲ್ಲಿ ಅವರಿಗೆ ಗೌರವಯುತ ಸ್ಥಾನ ಕಲ್ಪಿಸುವುದೂ ಆಗಿದೆ.

ತಂದೆ-ತಾಯಿಯರು ನಮ್ಮ ಜೀವನದ ಮೊದಲ ಗುರುಗಳು. ಅವರ ಅನುಭವ, ತ್ಯಾಗ ಮತ್ತು ಮಾರ್ಗದರ್ಶನ ನಮ್ಮ ಬದುಕಿನ ಅಮೂಲ್ಯ ಸಂಪತ್ತು. ಆದ್ದರಿಂದ ವಯಸ್ಸಾದ ತಂದೆ-ತಾಯಿಯನ್ನು ಪ್ರೀತಿಯಿಂದ ನೋಡಿಕೊಳ್ಳುವುದು ಕೇವಲ ಕುಟುಂಬದ ಕರ್ತವ್ಯವಲ್ಲ, ಅದು ಮಾನವೀಯತೆ ಮತ್ತು ಸಂಸ್ಕೃತಿಯ ಪ್ರತಿಬಿಂಬವಾಗಿದೆ ಎಂಬ ಸಂದೇಶವನ್ನು ಈ ಕಾರ್ಯಕ್ರಮದ ಆಶಯವು ಪ್ರತಿಧ್ವನಿಸಿತು.

ಪ್ರೊಫೆಸರ್ ಪೈಲೆಟ್ ಮೇಡಂ ಮತ್ತು ರಾಕಿ ಸರ್ಕಾರ್ ಅವರ ಉಪಸ್ಥಿತಿ ಮುಖ್ಯ ಅತಿಥಿಗಳಾದ ಪ್ರೊಫೆಸರ್ ಪೈಲೆಟ್ ಮೇಡಂ ಹಾಗೂ ರಾಕಿ ಸರ್ಕಾರ್ ಅವರ ಉಪಸ್ಥಿತಿಯೂ ಕಾರ್ಯಕ್ರಮದ ಪ್ರಮುಖ ಭಾಗವಾಗಿತ್ತು. ವಯೋವೃದ್ಧರ ಆರೈಕೆಯಂತಹ ಸಾಮಾಜಿಕ ಪ್ರಸ್ತುತತೆಯುಳ್ಳ ವಿಷಯದ ಕು-ರಿತು ನರ್ಸಿಂಗ್ ವಿದ್ಯಾರ್ಥಿಗಳು ಸೃಜನಶೀಲವಾಗಿ ಚಿಂತಿಸಿ ತಮ್ಮ ಅಭಿಪ್ರಾಯಗಳನ್ನು ಮಂಡಿಸಲು ಇಂತಹ ವೇದಿಕೆಗಳು ಸಹಕಾರಿಯಾಗುತ್ತವೆ. ನರ್ಸಿಂಗ್ ಶಿಕ್ಷಣವು ಪಠ್ಯಪುಸ್ತಕದ ಜ್ಞಾನಕ್ಕೆ ಮಾತ್ರ ಸೀಮಿತವಾಗದೆ, ರೋಗಿಗಳ ನೋವನ್ನು ಅರ್ಥಮಾಡಿಕೊಳ್ಳುವ ಸಂವೇದನಾಶೀಲತೆ, ಸೇವಾ ಮನೋಭಾವ ಮತ್ತು ಮಾನವೀಯ ದೃಷ್ಟಿಕೋನವನ್ನು ಬೆಳೆಸಬೇಕು. ವಿಶೇಷವಾಗಿ ವಯೋವೃದ್ಧರ ಆರೈಕೆಯಲ್ಲಿ ತಾಳ್ಮೆ, ಸಹಾನುಭೂತಿ, ಗೌರವ ಮತ್ತು ಜವಾಬ್ದಾ-ರಿಯುತ ಸೇವೆ ಅತ್ಯಗತ್ಯವಾಗಿರುವುದರಿಂದ ಈ ರೀತಿಯ ಸ್ಪರ್ಧೆಗಳು ವಿದ್ಯಾರ್ಥಿಗಳ ವ್ಯಕ್ತಿತ್ವ ಹಾಗೂ ವೃತ್ತಿಪರ ಬೆಳವಣಿಗೆಗೆ ಸಹಾಯಕವಾಗುತ್ತವೆ.

22 ತಂಡಗಳ ಭಾಗವಹಿಸುವಿಕೆ: ಕಲಿಕೆಯೊಂದಿಗೆ ಮಾನವೀಯ ಮೌಲ್ಯಗಳ ಬೆಳವಣಿಗೆ ಸುಮಾರು 22 ತಂಡಗಳು ಭಾಗವಹಿಸಿದ ಈ ಸ್ಪರ್ಧೆಯು ವಿದ್ಯಾರ್ಥಿಗಳಿಗೆ ತಮ್ಮ ಜ್ಞಾನ, ಕಲಾತ್ಮಕ ಕೌಶಲ ಮತ್ತು ಸಾಮಾಜಿಕ ಕಾಳ-ಜಿಯನ್ನು ಪ್ರದರ್ಶಿಸಲು ಅವಕಾಶ ಕಲ್ಪಿಸಿತು. ಪ್ರತಿ ತಂಡವೂ ವಯೋವೃದ್ಧರ ಆರೈಕೆಯ ವಿಭಿನ್ನ ಆಯಾಮಗಳನ್ನು ಗುರುತಿಸಿ, ಸಮಾಜದಲ್ಲಿ ಹಿರಿಯ-ರಿಗೆ ಸಿಗಬೇಕಾದ ಸ್ಥಾನಮಾನ ಮತ್ತು ಗೌರವದ ಬಗ್ಗೆ ಜಾಗೃತಿ ಮೂಡಿಸುವ ಪ್ರಯತ್ನ ಮಾಡಿತು.

ವಯೋವೃದ್ಧರಲ್ಲಿ ಕಂಡುಬರುವ ಏಕಾಂತ ಭಾವನೆ, ಕುಟುಂಬದ ಬೆಂಬಲದ ಕೊರತೆ, ಚಲನವಲನದ ತೊಂದರೆಗಳು, ಪೌಷ್ಟಿಕ ಆಹಾರದ ಅಗತ್ಯ, ನಿಯಮಿತ ಆರೋಗ್ಯ ತಪಾಸಣೆ ಮತ್ತು ಮಾನಸಿಕ ನೆಮ್ಮದಿಯ ಮಹತ್ವದಂತಹ ವಿಚಾರಗಳನ್ನು ವಿದ್ಯಾರ್ಥಿಗಳು ತಮ್ಮ ಸೃಜನಾತ್ಮಕ ಅಭಿವ್ಯಕ್ತಿಯ ಮೂಲಕ ಗಮನಕ್ಕೆ ತಂದರು.

ಈ ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ಕೇವಲ ಸ್ಪರ್ಧೆಯ ಅನುಭವವನ್ನು ನೀಡದೆ, ತಮ್ಮ ವೃತ್ತಿಜೀವನದಲ್ಲಿ ಹಿರಿಯ ನಾಗರಿಕರನ್ನು ಹೇಗೆ ಗೌರವದಿಂದ ಮತ್ತು ಕಾಳಜಿಯಿಂದ ನೋಡಿಕೊಳ್ಳಬೇಕು ಎಂಬುದರ ಕುರಿತು ಚಿಂತಿಸಲು ಪ್ರೇರಣೆ ನೀಡಿತು. ವಯೋವೃದ್ಧರ ಆರೈಕೆಯಲ್ಲಿ ಕುಟುಂಬ, ಆರೋಗ್ಯ ಸಂಸ್ಥೆಗಳು, ನರ್ಸಿಂಗ್ ಸಿಬ್ಬಂದಿ ಮತ್ತು ಸಮುದಾಯದ ಸಹಕಾರ ಅತ್ಯಗತ್ಯ ಎಂಬ ಅರಿವನ್ನೂ ಮೂಡಿಸಿತು.

ಮಾನವೀಯ ಸಮಾಜ ನಿರ್ಮಾಣಕ್ಕೆ ಅರ್ಥಪೂರ್ಣ ಸಂದೇಶ ವಯೋವೃದ್ಧರು ನಮ್ಮ ಕುಟುಂಬಗಳ ಅನುಭವದ ಸಂಪತ್ತು, ಸಂಸ್ಕೃತಿಯ ವಾಹಕರು ಮತ್ತು ಮುಂದಿನ ಪೀಳಿಗೆಗೆ ಮಾರ್ಗದರ್ಶಕರು. ಅವರ ಜೀವನದ ವೃದ್ಧಾಪ್ಯದ ಹಂತವನ್ನು ಸುರಕ್ಷಿತವಾಗಿ, ನೆಮ್ಮದಿಯಿಂದ ಮತ್ತು ಗೌರವದಿಂದ ಕಳೆಯಲು ನೆರವಾಗುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ನವೋದಯ ಕಾಲೇಜ್ ಆಫ್ ನರ್ಸಿಂಗ್‌ನಲ್ಲಿ ನಡೆದ ಈ ಪೋಸ್ಟರ್ ಮೇಕಿಂಗ್ ಸ್ಪರ್ಧೆಯು ಹಿರಿಯ ನಾಗರಿಕರ ಬಗ್ಗೆ ಪ್ರೀತಿ ಮತ್ತು ಕಾಳ-ಜಿಯನ್ನು ವ್ಯಕ್ತಪಡಿಸುವುದರ ಜೊತೆಗೆ, ನರ್ಸಿಂಗ್ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಸಂವೇದನಾಶೀಲತೆ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವ ಮಹತ್ವದ ಪ್ರಯತ್ನವಾಗಿ ಗಮನ ಸೆಳೆಯಿತು.

"ತಂದೆ-ತಾಯಿ ನಮ್ಮ ಆದ್ಯತೆ; ಹಿರಿಯರ ಆರೈಕೆ ನಮ್ಮ ಕರ್ತವ್ಯ; ಪ್ರೀತಿ ಮತ್ತು ಗೌರವ ನಮ್ಮ ಮಾನವೀಯತೆ." ಹಿರಿಯರಿಗೆ ಉತ್ತಮ ಆರೋಗ್ಯ ಸೇವೆ, ಕುಟುಂಬದ ಆತ್ಮೀಯತೆ ಮತ್ತು ಸಮಾಜದ ಗೌರವ ದೊರೆಯುವಂತಾಗಲಿ ಎಂಬ ಆಶಯದೊಂದಿಗೆ ಕಾರ್ಯಕ್ರಮವು ತನ್ನ ಸಾಮಾಜಿಕ ಸಂದೇಶವನ್ನು ಸಾರಿತು.



ಡಾ. ದಾನನಗೌಡ ಎಚ್. ವೈ ಅವರ ವಿಶೇಷ ಸಂದೇಶ:"ತಂದೆ-ತಾಯಿ ನಮ್ಮ ಆದ-ೄತೆ" "ತಂದೆ-ತಾಯಿ ನಮ್ಮ ಆದ್ಯತೆ" ಎಂಬ ಸಂದೇಶವು ವಯೋವೃದ್ಧರ ಆರೈಕೆಯ ಮಹತ್ವವನ್ನು ಸಾರುವ ಹೃದಯಸ್ಪರ್ಶಿ ಆಶಯವಾಗಿದೆ. ನಮ್ಮನ್ನು ಪ್ರೀತಿಯಿಂದ ಬೆಳೆಸಿ, ನಮ್ಮ ಭವಿಷ್ಯಕ್ಕಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟ ತಂದೆ-ತಾಯಿಯರು ವಯಸ್ಸಾದಾಗ ಅವರನ್ನು ಪ್ರೀತಿ ಮತ್ತು ಗೌರವದಿಂದ ನೋಡಿಕೊಳ್ಳುವುದು ಮಕ್ಕಳ ಮೊದಲ ಕರ್ತವ್ಯವಾಗಬೇಕು ಎಂಬ ಮೌಲ್ಯವನ್ನು ಈ ವಿಷಯವು ಎತ್ತಿಹಿಡಿಯುತ್ತದೆ. – ಡಾ. ದಾನನಗೌಡ ಎಚ್. ವೈ , ಪ್ರಾಧ್ಯಾಪಕ ನವೋದಯ ಕಾಲೇಜ್ ಆಫ್ ನರ್ಸಿಂಗ್ ರಾಯಚೂರು

ವಚನ ದರ್ಶನ

ಸಂಸಾರಸಾಗರದ ತೆರೆ ಕೊಬ್ಬಿ ಮುಖದ ಮೇಲೆ ಅಲೆವುತ್ತಲಿದೆ.
ಅದಕ್ಕೆ ಅಂಜುವೆ, ಎಂಜಲನೆಂಬೆ.ಭವಭಂಗವ ಮಾಡಿ ಕಾಯೋ
ಕೂಡಲಸಂಗಮದೇವಾ

ಸಂಸಾರ ಸಾಗರದ ತೆರೆ ಕೊಬ್ಬಿ..." ಎಂಬುದು ೧೨ನೇ ಶತಮಾನದ ಸಾಮಾಜಿಕ ಕ್ರಾಂತಿಕಾರಿ ಮತ್ತು ಮಹಾನ್ ಶಿವಶರಣರಾದ ವಿಶ್ವ ಗುರು ಬಸವಣ್ಣನವರು ರಚಿಸಿರುವ ಅತ್ಯಂತ ಪ್ರಸಿದ್ಧವಾದ ವಚನವಾಗಿದೆ.

ಈ ವಚನದಲ್ಲಿ ಬಸವಣ್ಣನವರು ಲೌಕಿಕ ಜೀವನದ (ಸಂಸಾರದ) ಕಷ್ಟ-ಕಾರ್ಪಣ್ಯಗಳನ್ನು ಮತ್ತು ಅದರಿಂದ ಪಾರಾಗಲು ಭಕ್ತಿಯ ದಾರಿಯನ್ನು ಹೇಗೆ ಕಂಡುಕೊಳ್ಳಬೇಕು ಎಂಬುದನ್ನು ಸಮುದ್ರದ ಅಲೆಗಳ ರೂಪಕದ ಮೂಲಕ ಅದ್ಭುತವಾಗಿ ವರ್ಣಿಸಿದ್ದಾರೆ.

ಸಂಸಾರಸಾಗರದ ತೆರೆ ಕೊಬ್ಬಿ ಮುಖದ ಮೇಲೆ ಅಲೆವುತ್ತಲಿದೆ: ನಮ್ಮ ಈ ಲೌಕಿಕ ಜೀವನ ಅಥವಾ ಸಂಸಾರ ಎಂಬುದು ಒಂದು ದೊಡ್ಡ ಸಮುದ್ರವಿದ್ದಂತೆ. ಈ ಸಮುದ್ರದಲ್ಲಿ ಏಳುವ ಆಸೆ, ಆಕಾಂಕ್ಷೆ, ಕಷ್ಟ, ದುಃಖ ಮತ್ತು ಪ್ರಲೋಭನೆಗಳೆಂಬ ಅಲೆಗಳು ಮಿತಿಮೀರಿ (ಕೊಬ್ಬಿ) ಬಂದು ನಮ್ಮ ಮುಖಕ್ಕೆ ಅಪ್ಪಳಿಸುತ್ತಿವೆ. ಅಂದರೆ, ಮನುಷ್ಯನು ಲೌಕಿಕ ಬದುಕಿನ ಜಂಜಾಟಗಳಲ್ಲಿ ಸಂಪೂರ್ಣವಾಗಿ ಸಿಲುಕಿ ಒದ್ದಾಡುತ್ತಿದ್ದಾನೆ.

ಅದಕ್ಕೆ ಅಂಜುವೆ, ಎಂಜಲನೆಂಬೆ: ಈ ಸಂಸಾರದ ಮಾಯೆ ಮತ್ತು ಕಷ್ಟಗಳನ್ನು ನೋಡಿ ನನಗೆ ಭಯವಾಗುತ್ತಿದೆ (ಅಂಜುವೆ). ಈ ಲೌಕಿಕ ಸುಖಗಳು ಶಾಶ್ವತವಲ್ಲ, ಇವು ಎಂಜಲಿನಂತೆ ಅಪವಿತ್ರ ಮತ್ತು ಕ್ಷಣಿಕ ಎಂದು ನನಗೆ ಅರ್ಥವಾಗಿದೆ.

ಭವಭಂಗವ ಮಾಡಿ ಕಾಯೋ ಕೂಡಲಸಂಗಮದೇವಾ:
ಎಲೈ ಕೂಡಲಸಂಗಮದೇವನೇ, ನನ್ನನ್ನು ಈ ಜನನ-ಮರಣಗಳ ಚಕ್ರದಿಂದ (ಭವಬಂಧನದಿಂದ) ಮುಕ್ತಗೊಳಿಸು. ಈ ಭವದ ದುಃಖಗಳನ್ನು ನಾಶಮಾಡಿ (ಭಂಗವ ಮಾಡಿ) ನನ್ನನ್ನು ಕಾಪಾಡು ಎಂದು ಬಸವಣ್ಣನವರು ದೇವರಲ್ಲಿ ಮೊರೆ ಇಡುತ್ತಾರೆ.

ಈ ವಚನದ ಆಳವಾದ ಆಧ್ಯಾತ್ಮಿಕ ತತ್ವವು ಇಂದಿಗೂ ಅನೇಕ ಜನ-ರಿಗೆ ಮಾರ್ಗದರ್ಶಿಯಾಗಿದೆ. ಉತ್ತರ ಕರ್ನಾಟಕದ ಪ್ರಸಿದ್ಧ ಭಜನಾ ಶೈಲಿಯಲ್ಲಿ ಇಂತಹ ತತ್ವಗಳನ್ನು ಇಂದಿಗೂ ಹಾಡಲಾಗುತ್ತದೆ.ಈ ವಚನದ ಭಾವಕ್ಕೆ ಹತ್ತಿರವಿರುವ, ಸಂಸಾರದ ಮಾಯೆಯನ್ನು ವಿವ-ರಿಸುವ ಸುಂದರವಾದ ಉತ್ತರ ಕರ್ನಾಟಕದ ಭಜನಾ ಪದವನ್ನು ನೀವು ಇಲ್ಲಿ ಕೇಳಬಹುದು ವಚನಗಳು ಮನುಕುಲದ ದಾರಿದೀಪ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ ಅಂತರಗಂಗಿ-ಸಿಂಧನೂರು. 998094144

ಅಂತರ-ಕಾಲೇಜು ಪೋಸ್ಟರ್ ತಯಾರಿಕೆ ಸ್ಪರ್ಧೆಯಲ್ಲಿ 'ಸನ್‌ರೈಸ್ ಸ್ಕೂಲ್ ಆಫ್ ನರ್ಸಿಂಗ್' ವಿದ್ಯಾರ್ಥಿನಿಯರಿಗೆ ತೃತೀಯ ಬಹುಮಾನ

❏ ನೈಜ್ಯ ದೆಸೆ ನ್ಯೂಸ್

ರಾಯಚೂರಿನ ನವೋದಯ ನರ್ಸಿಂಗ್ ಕಾಲೇಜಿನಲ್ಲಿ ಇತ್ತೀಚೆಗೆ ಅತ್ಯಂತ ಉತ್ಸಾಹದಿಂದ ಹಮ್ಮಿಕೊಳ್ಳಲಾಗಿದ್ದ ಅಂತರ-ಕಾಲೇಜು ಪೋಸ್ಟರ್ ತಯಾರಿಕೆ ಸ್ಪರ್ಧೆಯಲ್ಲಿ,

ನಮ್ಮ 'ಸನ್‌ರೈಸ್ ಸ್ಕೂಲ್ ಆಫ್ ನರ್ಸಿಂಗ್' ಸಂಸ್ಥೆಯ ಪ್ರತಿಭಾವಂತ ವಿದ್ಯಾರ್ಥಿನಿಯರಾದ ವಿದ್ಯಾಶ್ರೀ ಮತ್ತು ಸ್ಫೂರ್ತಿ ಅವರು ಅತ್ಯುತ್ತಮ ಪ್ರತಿಭೆ ಪ್ರದರ್ಶಿಸಿ 3ನೇ ಬಹುಮಾನವನ್ನು (ತೃತೀಯ ಬಹುಮಾನ) ಪಡೆದುಕೊಂಡು ಕಾಲೇಜಿಗೆ ಕೀರ್ತಿ ತಂದಿದ್ದಾರೆ. ವಿವಿಧ ನರ್ಸಿಂಗ್ ಕಾಲೇಜುಗಳಿಂದ ಒಟ್ಟು 22 ಸ್ಪರ್ಧಿಗಳು ಈ ಸ್ಪರ್ಧೆಯಲ್ಲಿ ಉತ್ಸಾಹದಿಂದ ಭಾಗವಹಿಸಿದ್ದರು. ತೀವ್ರ ಪೈಪೋಟಿಯಿಂದ ಕೂಡಿದ್ದ ಈ ಸ್ಪರ್ಧೆಯಲ್ಲಿ, ವಿದ್ಯಾರ್ಥಿನಿಯರಾದ ವಿದ್ಯಾಶ್ರೀ ಮತ್ತು ಸ್ಫೂರ್ತಿ ಅವರು ವಯೋವೃದ್ಧರ ಆರೋಗ್ಯ ಜಾಗೃತಿ, ನರ್ಸಿಂಗ್ ವೃತ್ತಿಯ ಮಹತ್ವ ಮತ್ತು ಸೃಜನಶೀಲತೆಯ



ಸಂದೇಶವನ್ನು ಸಾರುವ ಅತ್ಯಾಕರ್ಷಕ ಪೋಸ್ಟರ್ ಅನ್ನು ರೂಪಿಸಿದರು. ಇವರ ಕಲಾತ್ಮಕ ಕೌಶಲ್ಯ ಮತ್ತು ಆಳವಾದ ವಿಷಯ ಗ್ರಹಿಕೆಯನ್ನು ಪರಿಗಣಿಸಿದ ನಿರ್ಣಾಯಕರು ಇವರಿಗೆ ತೃತೀಯ ಸ್ಥಾನವನ್ನು ಘೋಷಿಸಿದರು.

ವಿದ್ಯಾರ್ಥಿನಿಯರ ಈ ಗಮನಾರ್ಹ ಸಾಧನೆಗೆ ಸನ್‌ರೈಸ್ ಸ್ಕೂಲ್ ಆಫ್ ನರ್ಸಿಂಗ್‌ನ ಅಧ್ಯಕ್ಷರು, ಆಡಳಿತ ಮಂಡಳಿ, ಪ್ರಾಂಶುಪಾಲರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಕಾಲೇಜಿನ ಪ್ರಾಂಶುಪಾಲರು, "ನಮ್ಮ ವಿದ್ಯಾರ್ಥಿನಿಯರು ಕೇವಲ ಅಕಾಡೆಮಿಕ್ಸ್‌ನಲ್ಲಿ ಮಾತ್ರವಲ್ಲದೆ, ಇಂತಹ ಸೃಜನಶೀಲ ಮತ್ತು ಪಠ್ಯೇತರ ಚಟುವಟಿಕೆಗಳಲ್ಲೂ ಮುಂಚೂಣಿಯಲ್ಲಿದ್ದಾರೆ. 22 ಪ್ರತಿಭಾವಂತ ಸ್ಪರ್ಧಿಗಳ ನಡುವೆ 3ನೇ ಸ್ಥಾನ ಪಡೆಯುವುದು ಸುಲಭವಲ್ಲ. ಇದು ಇವರ ಪರಿಶ್ರಮ ಹಾಗೂ ನಮ್ಮ ಕಾಲೇಜಿನ ಗುಣಮಟ್ಟದ ಶಿಕ್ಷಣಕ್ಕೆ ಹಿಡಿದ ಕೈಗನ್ನಡಿಯಾಗಿದೆ. ವಿದ್ಯಾರ್ಥಿನಿಯರ ಮುಂದಿನ ಶೈಕ್ಷಣಿಕ ಹಾಗೂ ವೃತ್ತಿಜೀವನ ಯಶಸ್ವಿಯಾಗಲಿ" ಎಂದು ಹಾರೈಸಿದರು.

ಕಾಲೇಜಿನ ಉಪನ್ಯಾಸಕರು ಮತ್ತು ಸಹಪಾಠಿಗಳು ವಿಜೇತ ವಿದ್ಯಾರ್ಥಿನಿಯರಾದ ವಿದ್ಯಾಶ್ರೀ ಹಾಗೂ ಸ್ಫೂರ್ತಿ ಅವರಿಗೆ ವಿಶೇಷ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ. ಈ ಸಾಧನೆಯು ಮುಂಬರುವ ದಿನಗಳಲ್ಲಿ ಕಾಲೇಜಿನ ಇತರ ವಿದ್ಯಾರ್ಥಿಗಳಿಗೂ ಸ್ಫೂರ್ತಿಯಾಗಲಿದೆ ಎಂದು ಆಶಿಸಲಾಗಿದೆ.

ಮೈಸೂರಿನಲ್ಲಿ 'ಕ್ಯಾಂಗರೂ ಕೇರ್ ಕಿಡ್ಸ್' ಚಾಲನೆ: ಮೈಸೂರಿನ ಪ್ರಥಮ ಪ್ರತ್ಯೇಕ ಬಹುಅಂಗಗಳ ಮಕ್ಕಳ ಆಸ್ಪತ್ರೆ ಶುಭಾರಂಭ ಸುತ್ತೂರು ಶ್ರೀಗಳು ಸಿದ್ದಗಂಗಾ ಮಠದ ಶ್ರೀಗಳು ಭಾಗಿ

❏ ನೈಜ್ಯ ದೆಸೆ ನ್ಯೂಸ್

ತಾಂಡವಪುರ ಅಕ್ಟೋಬರ್ 29 ಅತ್ಯಾಧುನಿಕ ವೈದ್ಯಕೀಯ ಸೌಲಭ್ಯ ಹಾಗೂ ವಿವಿಧ ಹಂತದ ಮಕ್ಕಳ ವಿಶೇಷ ಚಿಕಿತ್ಸಾ ವಿಭಾಗಗಳನ್ನು ಒಂದೇ ಸೂರಿನಡಿಯಲ್ಲಿ ಒದಗಿಸುವ ಮೈಸೂ-ರಿನ ಮೊದಲ ಪ್ರತ್ಯೇಕ ಬಹುಅಂಗಗಳ (ಮಲ್ಟಿಸ್ಪೆಷಾಲಿಟಿ) ಮಕ್ಕಳ ಆಸ್ಪತ್ರೆ 'ಕ್ಯಾಂಗರೂ ಕೇರ್ ಕಿಡ್ಸ್' ಗುರುವಾರ ಮೈಸೂರಿನಲ್ಲಿ ಸಡಗರದಿಂದ ಕಾರ್ಯಾರಂಭ ಮಾಡಿತು.

ಚಿಕಿತ್ಸೆಗೆ ಆಗಮಿಸುವ ಮಕ್ಕಳು ಮತ್ತು ಅವರ ಪೋಷಕರಿಗೆ ಅತ್ಯಂತ ಮುಕ್ತ, ಕರುಣಾಪೂರಿತ ಹಾಗೂ ಆರಾಮದಾಯಕ ವಾತಾವರಣದಲ್ಲಿ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವುದು ಈ ನೂತನ ಆಸ್ಪತ್ರೆಯ ಪ್ರಮುಖ ಉದ್ದೇಶವಾಗಿದ್ದು ಈ ಕಾರ್ಯಕ್ರಮಕ್ಕೆ ಸುತ್ತೂರು ಶ್ರೀಮಠದ ಶ್ರೀಗಳು ಸಿದ್ದಗಂಗಾ ಮಠದ ಶ್ರೀಗಳುಭಾಗಿಯಾಗಿದ್ದರು ಈ ಆಸ್ಪತ್ರೆಯು ಮಕ್ಕಳ ಮೂಳೆ ರೋಗ, ನರರೋಗ, ಮೂತ್ರಪಿಂಡ ರೋಗ, ಜೀರ್ಣಾಂಗ ವ್ಯೂಹ ರೋಗ, ಎಂಡೋಕ್ರಿನಾಲಜಿ, ನೇತ್ರಶಾಸ್ತ್ರ ಮತ್ತು ಹೃದ್ರೋಗ ಸೇರಿದಂತೆ ಹಲವು ಪ್ರಮುಖ ಸೂಪರ್ ಸ್ಪೆಷಾಲಿಟಿ ವಿಭಾಗಗಳನ್ನು ಒಳಗೊಂಡಿದೆ. ಇದರೊಂದಿಗೆ ಮಕ್ಕಳ ಆಸ್ಪತ್ರೆಗೆ ಅತ್ಯಗತ್ಯವಾಗಿರುವ ಅತ್ಯಂತ ತುರ್ತು ನಿಗಾ ಘಟಕ (ಪಿಐಸಿಯು), ನವಜಾತ ಶಿಶುಗಳ ನಿಗಾ ಘಟಕ (ಎನ್‌ಐಸಿಯು), ಹೈ ಡಿಪೆಂಡೆನ್ಸಿ ಯುನಿಟ್ (ಎಚ್‌ಡಿಯು), ಫಿಸಿಯೋಥೆರಪಿ ವಿಭಾಗ, ತಾಯಂದಿರ ಹಾಲಿನ ಬ್ಯಾಂಕ್ ಹಾಗೂ ರಕ್ತ ಸಂಗ್ರಹಣಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

ಮಗುವಿನ ವಿಶೇಷ ಅಗತ್ಯತೆಗಳನ್ನು ಮನಸ್ಸಿನಲ್ಲಿಟ್ಟುಕೊಂಡು ಆಸ್ಪತ್ರೆಯನ್ನು ವಿನ್ಯಾಸಗೊಳಿಸಲಾಗಿದ್ದು, ಮಕ್ಕಳು ಆತಂಕವಿಲ್ಲದೆ ಆರಾಮವಾಗಿರಲು ಪ್ರತ್ಯೇಕ ಆಟದ ಪ್ರದೇಶವನ್ನೂ ಸಜ್ಜುಗೊಳಿಸಲಾಗಿದೆ. ಈ ಮಗುಸ್ನೇಹಿ ವಾತಾವರಣವು ಮಕ್ಕಳು ಮತ್ತು ಪೋಷಕರ ಮೇಲಿನ ಮಾನಸಿಕ ಒತ್ತಡವನ್ನು ತಗ್ಗಿಸಲು ನೆರವಾಗಲಿದೆ. ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಕ್ಯಾಂಗರೂ ಕೇರ್ ಸಂಸ್ಥೆಯ ಸಂಸ್ಥಾಪಕ ನಿರ್ದೇಶಕ, ಸಿಇಒ ಹಾಗೂ ಹಿರಿಯ ನವಜಾತ ಶಿಶು ವೈದ್ಯ ಡಾ. ಶೇಖರ್ ಸುಬ್ಬಯ್ಯ, ವಿಶೇಷ ಸೌಲಭ್ಯಗಳ ಮಕ್ಕಳ ವೈದ್ಯಕೀಯ ಸೇವೆಯನ್ನು ಪ್ರತಿಯೊಬ್ಬರಿಗೂ ಸುಲಭವಾಗಿ ಸಿಗುವಂತೆ ಮಾಡುವುದೇ ನಮ್ಮ ಮುಖ್ಯ ಧ್ಯೇಯ ಎಂದರು.

ಪ್ರತಿಯೊಂದು ಮಗುವಿಗೂ ಸುರಕ್ಷಿತ



ಹಾಗೂ ಮಗುಸ್ನೇಹಿ ವಾತಾವರಣದಲ್ಲಿ ಉತ್ತಮ ಚಿಕಿತ್ಸೆ ಪಡೆಯುವ ಹಕ್ಕಿದ್ದು, ವಿಭಿನ್ನ ಆರೋಗ್ಯ ಸಮಸ್ಯೆಗಳ ಚಿಕಿತ್ಸೆಗೆ ಪೋಷಕರು ಬೇರೆ ಬೇರೆ ಆಸ್ಪತ್ರೆಗಳಿಗೆ ಅಲೆಯುವುದನ್ನು ತಪ್ಪಿಸಲು ಎಲ್ಲ ಸುಧಾರಿತ ವೈದ್ಯಕೀಯ ಅಗತ್ಯಗಳನ್ನು ಒಂದೇ ಸೂರಿನಡಿ ತರಲಾಗಿದೆ ಎಂದು ತಿಳಿಸಿದರು. ನಮ್ಮ ಈ ತುರ್ತು ನಿಗಾ ಘಟಕಗಳು ಹಾಗೂ ವಿಶಾಲ ಚಿಕಿತ್ಸಾ ಸೌಲಭ್ಯಗಳು ಮೈಸೂರು ಮತ್ತು ಸುತ್ತಮುತ್ತಲಿನ ಭಾಗದ ಮಕ್ಕಳಿಗೆ ಉತ್ಕೃಷ್ಟ ಚಿಕಿತ್ಸೆ ನೀಡುವ ಬದ್ಧತೆಯನ್ನು ಸಾರುತ್ತವೆ ಎಂದರು. ಈ ಶುಭಾರಂಭ ಸಮಾರಂಭದಲ್ಲಿ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ತುಮಕೂರಿನ ಸಿದ್ದಗಂಗಾ ಮಠಾಧ್ಯಕ್ಷರಾದ ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳು, ಬೆಂಗಳೂರಿನ ಗೋಕುಲ ಎಜುಕೇಷನಲ್ ಫೌಂಡೇಶನ್ ಸಂಸ್ಥೆಯ ಅಧ್ಯಕ್ಷರು ಹಾಗೂ ಶಾಸಕರಾದ ಡಾ. ಎಂ. ಆರ್. ಜಯರಾಮ್ ಮತ್ತು ಸಂಸ್ಥೆಯ ಉಪಾಧ್ಯಕ್ಷರಾದ ಡಾ. ಎಂ. ಆರ್. ಸೀತಾರಾಮ್ ಅವರು ಭಾಗವಹಿಸಿ ಕಾರ್ಯಕ್ರಮಕ್ಕೆ ಸಾನ್ನಿಧ್ಯ ಹಾಗೂ ಶುಭ ಹಾರೈಕೆಗಳ ಮೆರುಗು ತಂದರು.

ನ.1 ಭಾನುವಾರವಾದರೂ ಶಾಲೆಗಳಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ ಕಡ್ಡಾಯ

❏ ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಈ ವರ್ಷದ ಕನ್ನಡ ರಾಜ್ಯೋತ್ಸವ (ನವೆಂಬರ್ 1) ಭಾನುವಾರದಂದು ಬಂದಿದ್ದರೂ ಸಹ, ರಾಜ್ಯದ ಎಲ್ಲಾ ಶಾಲೆಗಳಲ್ಲಿ ಕಡ್ಡಾಯವಾಗಿ ಕನ್ನಡ ರಾಜ್ಯೋತ್ಸವವನ್ನು ಆಚ-ರಿಸಬೇಕು ಎಂದು ಕರ್ನಾಟಕ ಸರ್ಕಾರ ಮತ್ತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸ್ಪಷ್ಟ ನಿರ್ದೇಶನ ನೀಡಿದೆ.ನಕ್ಷೆಗಳನ್ನು ನೋಡಿ



ರಾಜ್ಯದ ಪ್ರತಿಯೊಂದು ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ (ಖಾಸಗಿ) ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ರಾಜ್ಯೋತ್ಸವವನ್ನು ಗೌರವಪೂರ್ವಕವಾಗಿ ಆಚ-ರಿಸುವುದು ಕಡ್ಡಾಯವಾಗಿದೆ. ಅಕ್ಟೋಬರ್ 15 ರಂದು ಶಿಕ್ಷಣ ಇಲಾಖೆಯ ಆಯುಕ್ತರ ಕಚೇರಿಯಿಂದ ಹೊರಡಿಸಲಾದ ಸುತ್ತೋಲೆಯ ಪ್ರಕಾರ, ರಾಷ್ಟ್ರೀಯ ಮತ್ತು ರಾಜ್ಯ ಹಬ್ಬಗಳನ್ನು ನಿಯಮಗಳಂತೆ ನಿಗದಿತ ದಿನದಂದೇ ಆಚರಿಸಬೇಕು. ರಾಜ್ಯದಾದ್ಯಂತ ಎಲ್ಲಾ ಶಾಲೆಗಳಲ್ಲಿಯೂ ಈ ಆಚ-ರಣೆಗಳು ಸಮರ್ಪಕವಾಗಿ ನಡೆಯುತ್ತಿವೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಲು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಆ ದಿನ ರಜಾದಿನವಿದೆ (ಭಾನುವಾರ) ಎಂಬ ಕಾರಣ ನೀಡಿ ರಾಜ್ಯ ಹಬ್ಬಗಳ ಆಚರಣೆಯನ್ನು ಮುಂದೂಡಲು ಅಥವಾ ರದ್ದುಗೊಳಿಸಲು ಸಾಧ್ಯವಿಲ್ಲ. ಕನ್ನಡ ರಾಜ್ಯೋತ್ಸವ ಆಚರಣೆಯನ್ನು ಯಾರೂ ನಿರ್ಲಕ್ಷಿಸಬಾರದು. ಇದು ಪ್ರತಿಯೊಬ್ಬ ಕನ್ನಡಿಗರ ಹಬ್ಬ ಮತ್ತು ನಮೆಲ್ಲರ ಹೆಮ್ಮೆಯ ಹಬ್ಬ ಎಂದು ದಿನ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ, ಅವರು ತಿಳಿಸಿದ್ದಾರೆ.

ಮಾದಪ್ಪನ ಹುಂಡಿಯಲ್ಲಿ 36 ದಿನಗಳಲ್ಲಿ 2.79 ಕೋಟಿ ರೂ. ಕಾಣಿಕೆ ಸಂಗ್ರಹ

❏ ನೈಜ್ಯ ದೆಸೆ ನ್ಯೂಸ್

ಹನೂರು: ತಾಲ್ಲೂಕಿನ ಪುಣ್ಯಕ್ಷೇತ್ರ ಶ್ರೀಮಲೆ ಮಹದೇಶ್ವರ ಬೆಟ್ಟ ಮಾದಪ್ಪನ ದೇಗುಲದಲ್ಲಿ ಹುಂಡಿ ಹಣ ಎಣಿಕೆ ನಡೆದಿದ್ದು , 36 ದಿನಗಳಲ್ಲಿ 2.79 ಕೋಟಿ ರೂಗಳು ಸಂಗ್ರಹ ಆಗಿದೆ.ಸಾಲೂರು ಬೃಹನಠಾಧ್ಯಕ್ಷರಾದ ಡಾ. ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ ರವರ ಉಪಸ್ಥಿತಿಯಲ್ಲಿ ಶ್ರೀ ಮಲೆ ಮಹದೇಶ್ವರ ಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಜಿ.ಪುರುಷೋತ್ತಮ್ ರವರ ನೇತೃತ್ವದಲ್ಲಿ ಹುಂಡಿ ಹಣ ಎಣಿಕೆ ಕಾರ್ಯ ನಡೆದಿದೆ.

36 ದಿನಗಳಲ್ಲಿ 2,79,16,048 ರೂ. ನಗದು (ಹುಂಡಿ ಮತ್ತು ಇ-ಹುಂಡಿ ಸೇರಿ) ಹಾಗೂ ಚಿನ್ನ 19 ಗ್ರಾಂ 800 ಮಿಲಿ, ಬೆಳ್ಳಿ 1 ಕೆ.ಜಿ.145 ಗ್ರಾಂ, 2 ವಿದೇಶಿ ನೋಟುಗಳು,



2 ಸಾವಿರ ಮುಖ ಬೆಲೆ 3 ನೋಟುಗಳು ಹುಂಡಿಯಲ್ಲಿ ದೊರೆತಿದೆ.ಈ ಬಾರಿಯೂ ಭಕ್ತ-ರಿಂದ ಹರಕೆ ರೂಪದಲ್ಲಿ ಇಷ್ಟೊಂದು ದೊಡ್ಡ ಮೊತ್ತದ ಕಾಣಿಕೆ ಸಂಧಿರುವುದು ಆಯುಧ ಪೂಜೆ ,ವಿಜಯ ದಶಮಿ, ಅಮಾವಾಸ್ಯೆ, ಹುಣ್ಣಿಮೆ, ಸರ್ಕಾರದ ಶಕ್ತಿ ಯೋಜನೆಯಡಿ ಮಹಿಳೆಯರ ಉಚಿತ ಪ್ರಯಾಣ, ರಜಾ ದಿನಗಳು ,ವಿದೇಶಿ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಶ್ರೀ ಕ್ರೇತ್ರಕ್ಕೆ ಭೇಟಿ ನೀಡಿದ್ದರಿಂದ ಹೆಚ್ಚು ಹಣ ಸಂಗ್ರಹವಾಗಿದೆ.

ಮ. ಬೆಟ್ಟ ಬಸ್ ನಿಲ್ದಾಣದ ವಾಣಿಜ್ಯ ಕಟ್ಟಡದಲ್ಲಿ ಸಿಸಿ ಕ್ಯಾಮರಗಳ ಕಣ್ಗಾವಲಿನಲ್ಲಿ ಹಾಗೂ ಮ.ಬೆಟ್ಟ ಠಾಣೆ ಪೊಲೀಸ್ ಬಂದೋಬಸ್ತಿನಲ್ಲಿ ಪ್ರಾಧಿಕಾರದ ಸಿಬ್ಬಂದಿಗಳು ಹಾಗೂ ಕೊಳ್ಳೇಗಾಲ ಬ್ಯಾಂಕ್ ಆಫ್ ಬರೋಡ ಸ್ಥಳೀಯ ಶಾಖೆ ಸಿಬ್ಬಂದಿಗಳು ಹುಂಡಿ ಎಣಿಕೆ ಕಾರ್ಯದಲ್ಲಿ ತೊಡಗಿದ್ದರು.

ಹುಂಡಿ ಎಣಿಕೆ ಕಾರ್ಯದಲ್ಲಿ ಪ್ರಾಧಿಕಾರದ ಉಪ ಕಾರ್ಯದರ್ಶಿ ಚಂದ್ರಶೇಖರ, ಚಾ.ನಗರ ಜಿಲ್ಲಾಡಳಿತ ಕಛೇ-ರಿಯ ವಿಷಯ ನಿರ್ವಾಹಕಿ ಸಂಗೀತ, ಬ್ಯಾಂಕ್ ಆಫ್ ಬರೋಡ ಕೊಳ್ಳೇಗಾಲ ಶಾಖೆಯ ವ್ಯವಸ್ಥಾಪಕರಾದ ರವಿಶಂಕರ್ ಮತ್ತು ಸಿಬ್ಬಂದಿ ವರ್ಗ, ಪ್ರಾಧಿಕಾರದ ಹಣಕಾಸು ಮತ್ತು ಲೆಕ್ಕಪತ್ರ ಸಲಹೆಗಾರ ಮಹದೇವು , ಪ್ರಾಧಿಕಾರದ ಸಿಬ್ಬಂದಿಗಳಾದ ಸರಗೂರು ಮಹದೇವಸ್ವಾಮಿ, ಇಂದ್ರೇಶ್, ಜನಾರ್ಧನ್, ವೆಂಕಟಾಚಾರಿ, ಮಹೇಶ್ ಕುಮಾರ್, ಪಾರುಪತ್ತೇದಾರ್ ಮಹಾಲಿಂಗನ ಕಟ್ಟೆ ಮಾದೇಶ್, ಸೂಪರ್‌ವೈಸರ್ ಮಾದೇಶ್ ಮತ್ತು ಪ್ರಾಧಿಕಾರದ ಎಲ್ಲಾ ವಿಭಾಗಗಳ ಸಿಬ್ಬಂದಿ ವರ್ಗದವರು , ಮ.ಬೆಟ್ಟದ ಪೊಲೀಸ್ ಠಾಣೆ ಪಿಎಸ್ಐ ಜಯರಾಮ್ ಹಾಗೂ ಪ್ರಾಧಿಕಾರದ ನಾಮ ನಿರ್ದೇಶಿತ ಸದಸ್ಯರಾದ ಮರಿಸ್ವಾಮಿ ಕಾಗಲವಾಡಿ ಮೊಳೆ, ಭಾಗ್ಯಮ ಕುಪ್ಯಾ ಹಾಜರಿದ್ದರು.

ಜಾಲಹಳ್ಳಿಯಲ್ಲಿ 76ಕ್ಕೂ ಅಧಿಕ ಜೋಡಿಗಳ ಸಾಮೂಹಿಕ ವಿವಾಹ ಸಂಭ್ರಮ

❏ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮದ ಆರಾಧ್ಯದೈವ ಶ್ರೀ ಲಕ್ಷ್ಮೀ ರಂಗನಾಥ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಶ್ರೀ ಲಕ್ಷ್ಮೀ ರಂಗನಾಥ ಗೋವಿಂದ ಸೇವಾ ಸಮಿತಿ ವತಿಯಿಂದ ಆಯೋಜಿಸಿದ್ದ 76ಕ್ಕೂ ಅಧಿಕ ಜೋಡಿಗಳ ಸಾಮೂಹಿಕ ವಿವಾಹ ಸಮಾರಂಭ ಅದ್ದೂರಿಯಾಗಿ ಜರುಗಿತು.

ಕಾರ್ಯಕ್ರಮದ ಆರಂಭದಲ್ಲಿ ಡಾ. ಆರ್.ಎಸ್. ಹುಲಮನಿ ಗೌಡ ಅವರು ಭಕ್ತಿಗೀತೆ ಹಾಡಿದರು. ಬಳಿಕ ರೈತರ ಗೌರವಾರ್ಥವಾಗಿ ರೈತಗೀತೆಯನ್ನು ಸಾಮೂಹಿಕವಾಗಿ ಹಾಡಲಾಯಿತು. ಕಾಶಿ ಜಗದ್ಗುರುಗಳಾದ ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯರು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಸಾಮೂಹಿಕ ವಿವಾಹಗಳಿಂದ ಆರ್ಥಿಕ ಹೊರೆ ಕಡಿಮೆ: ಶಾಸಕಿ ಕರೆಮ್ಮ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ದೇವದುರ್ಗ ಕ್ಷೇತ್ರದ ಶಾಸಕಿ ಕರೆಮ್ಮ ಜಿ. ನಾಯಕ, ಮದುವೆ ಪ್ರತಿಯೊಬ್ಬರ ಜೀವನದ ಮಹತ್ವದ ಘಟ್ಟವಾಗಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಮದುವೆ ಸಮಾರಂಭಗಳ ಹೆಸ-ರಿನಲ್ಲಿ ದುಂದು ವೆಚ್ಚ ಮಾಡುವುದು ಸಾಮಾನ್ಯವಾಗುತ್ತಿದೆ. ಇಂತಹ ಸಂದರ್ಭದಲ್ಲಿ ಸಾಮೂಹಿಕ ವಿವಾಹಗಳು ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವುದರ ಜತೆಗೆ ಸಮಾಜದಲ್ಲಿ ಸಮಾನತೆ ಮತ್ತು ಸಹಬಾಳ್ವೆಯ ಭಾವನೆ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು. ಗೋವಿಂದ ಸೇವಾ ಸಮಿತಿಯವರು ಎಲ್ಲ ಸಮಾಜದ ಜನರನ್ನು ಒಗ್ಗೂಡಿಸಿ, ಎಲ್ಲರ ಸಹಕಾರದೊಂದಿಗೆ 76ಕ್ಕೂ ಅಧಿಕ ಜೋಡಿಗಳ ಸಾಮೂಹಿಕ ವಿವಾಹ ಆಯೋಜಿಸಿರುವುದು ಶ್ಲಾಘನೀಯ ಕಾರ್ಯವಾಗಿದೆ. ಇಂತಹ ಕಾರ್ಯಕ್ರಮಗಳನ್ನು ಸಂಘಟಿಸುವುದು



ದೊಡ್ಡ ಜವಾಬ್ದಾರಿಯ ಕೆಲಸವಾಗಿದ್ದು, ಪ್ರತಿಯೊಬ್ಬರೂ ಸಾಮೂಹಿಕ ವಿವಾಹಗಳಿಗೆ ಪ್ರೋತ್ಸಾಹ ನೀಡಬೇಕು ಎಂದು ಕರೆ ನೀಡಿದರು.

ಶಾಸಕಿಯಾಗಿ ಆಯ್ಕೆಯಾದ ಬಳಿಕ ಜಾಲಹಳ್ಳಿ ಗ್ರಾಮದಲ್ಲಿ ಶಾಲಾ ಕಟ್ಟಡ, ರಸ್ತೆ ನಿರ್ಮಾಣ ಸೇರಿದಂತೆ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡಿದ್ದೇನೆ. ಕಳೆದ ಮೂರು ವರ್ಷಗಳಿಂದ ಸಾಮೂಹಿಕ ವಿವಾಹದಲ್ಲಿ ಪಾಲ್ಗೊಳ್ಳುವ ನವವಧು-ವರ-ರಿಗೆ ಬಂಗಾರದ ಮಾಂಗಲ್ಯ ನೀಡುವ ಮೂಲಕ ನನ್ನ ಕೈಲಾದ ಸೇವೆ ಸಲ್ಲಿಸುತ್ತಿದ್ದೇನೆ. ಇಂತಹ ಕಾರ್ಯಗಳು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ನೆರವಾಗುವುದರ ಜತೆಗೆ ಸಾಮಾಜಿಕ ತಾರತಮ್ಯ ನಿವಾರಣೆಗೂ ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

ಸಾಮೂಹಿಕ ವಿವಾಹ ಆಯೋಜನೆ ಶ್ಲಾಘನೀಯ: ಕಾಶಿ ಜಗದ್ಗುರುಗಳು ಆಶೀರ್ವಚನ ನೀಡಿ ಮಾತನಾಡಿದ ಕಾಶಿ ಜಗದ್ಗುರುಗಳಾದ ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯರು, ಇಂದಿನ ದಿನಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿಯೂ ಒಂದು ಮದುವೆ ನೆರವೇರಿಸಲು ಸುಮಾರು ?5ರಿಂದ ?6 ಲಕ್ಷದವರೆಗೆ ವೆಚ್ಚವಾಗುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಸಾಮಾನ್ಯ ಕುಟುಂಬಗಳಿಗೆ ಮದುವೆ ಮಾಡುವುದು ಆರ್ಥಿಕವಾಗಿ ದೊಡ್ಡ ಸವಾಲಾಗಿದೆ. ಈ ಹಿನ್ನೆಲೆಯಲ್ಲಿ ಜಾಲಹಳ್ಳಿಯ ಶ್ರೀ ರಂಗನಾಥ ಸ್ವಾಮಿ ಗೋವಿಂದ ಸೇವಾ ಸಮಿತಿಯವರು ಎಲ್ಲರ ಸಹಕಾರದೊಂದಿಗೆ ಸಾಮೂಹಿಕ ವಿವಾಹ ಆಯೋಜಿಸಿರುವುದು ಮಹತ್ವದ ಕಾರ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶ್ರೀ ರಂಗನಾಥ ಸ್ವಾಮಿ ದೇವಸ್ಥಾನವು ಪುರಾತನ ಇತಿಹಾಸ ಹೊಂದಿದ್ದು, ಇಲ್ಲಿನ ಜಾತ್ರೆಯು ಮೊದಲಿನಿಂದಲೂ ಅದ್ದೂರಿಯಾಗಿ ನಡೆಯುತ್ತಿದೆ. ಪ್ರತಿವರ್ಷ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಾರೆ. ಆದರೆ ಜಾತ್ರೆ ನಡೆಯುವ ಸ್ಥಳದಲ್ಲಿ ಜನಸಂದಣಿ ಹೆಚ್ಚಾಗುತ್ತಿದ್ದು, ಮುಂದಿನ ದಿನಗಳಲ್ಲಿ ಲಭ್ಯವಿರುವ ಜಾಗ ಸಾಲದಾಗುವ ಸಾಧ್ಯತೆಯಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಭವಿಷ್ಯದಲ್ಲಿ ಜಾತ್ರೆ ಮತ್ತು ಸಾಮೂಹಿಕ ವಿವಾಹಗಳಂತಹ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲು ತೊಂದರೆಯಾಗದಂತೆ ದೇವಸ್ಥಾನದ ಜಾಗವನ್ನು ಸಂರಕ್ಷಿಸುವ ಬಗ್ಗೆ ಭಕ್ತರು ಮತ್ತು ಗ್ರಾಮಸ್ಥರು ಜಾಗೃತರಾಗಬೇಕು. ಪೂಜಾರಿಗಳಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸುವ ಮೂಲಕ ಜಾತ್ರೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳಿಗೆ ಯಾವುದೇ ಅಡ್ಡಿಯಾಗದಂತೆ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ದಾನಿಗಳಸಹಕಾರಸ್ಮರಿಸಿದಗಿರಿಯಪ್ಪಪೂಜಾರಿ ಕಾರ್ಯಕ್ರಮದ ಪ್ರಾಸ್ತಾವಿಕ ಭಾಷಣ ಮಾಡಿದ ಗಿರಿಯಪ್ಪ ಪೂಜಾರಿ, ಶ್ರೀ ಲಕ್ಷ್ಮೀ ರಂಗನಾಥ ಸ್ವಾಮಿ ದೇವಸ್ಥಾನದ ಗೋವಿಂದ ಸೇವಾ ಸಮಿತಿ ವತಿಯಿಂದ 2013ರಿಂದ ಸಾಮೂಹಿಕ ವಿವಾಹಗಳನ್ನು ಆಯೋಜಿಸಿಕೊಂಡು ಬರಲಾಗುತ್ತಿದೆ ಎಂದು ತಿಳಿಸಿದರು.

ಶಾಸಕಿ ಕರೆಮ್ಮ ಜಿ. ನಾಯಕ ಅವರು ಕಳೆದ ಮೂರು ವರ್ಷಗಳಿಂದ ನವವಧು-ವರರಿಗೆ ಬಂಗಾರದ ಮಾಂಗಲ್ಯ ನೀಡುತ್ತಿದ್ದಾರೆ. ಸುರಪುರದ ಮಾಜಿ ಶಾಸಕ ರಾಜುಗೌಡ ಅವರು 2013ರಿಂದ ವಧು-ವರರಿಗೆ ಬಟ್ಟೆಗಳನ್ನು ಒದಗಿಸುತ್ತಿದ್ದಾರೆ. ಅದೇ ರೀತಿ ರಾಮನಗೌಡ ಅವರು ಪ್ರತಿವರ್ಷ ಐದು ಕ್ವಿಂಟಲ್ ಸಕ್ಕರೆ ನೀಡುವ ಮೂಲಕ ಸಹಕರಿಸುತ್ತಿದ್ದಾರೆ. ಸಾಮೂಹಿಕ ವಿವಾಹದ ಯಶಸ್ಸಿಗೆ ನೆರವಾಗುತ್ತಿರುವ ಎಲ್ಲ ದಾನಿಗಳ ಸೇವೆಯನ್ನು ಸ್ಮರಿಸುವುದಾಗಿ ಹೇಳಿದರು.

ದಾನ ಮಾಡುವುದನ್ನು ರೂಢಿಸಿಕೊಳ್ಳಿ: ಜಯಶಾಂತೇಶ್ವರ ಸ್ವಾಮಿಗಳು ಜಗದರಾಧ್ಯ ಜಯಶಾಂತೇಶ್ವರ ಸ್ವಾಮಿಗಳು ಆಶೀರ್ವಚನ ನೀಡಿ, ಪ್ರತಿಯೊಬ್ಬರೂ ದಾನ ಮಾಡುವುದನ್ನು ರೂಢಿಸಿಕೊಳ್ಳಬೇಕು. ದಾನವು ಸಮಾಜದಲ್ಲಿ ಪರೋಪಕಾರದಮನೋಭಾವಬೆಳೆಸುವುದರಜತೆಗೆಆದ-ಾತ್ಮಿಕ ಉನ್ನತಿಗೂ ದಾರಿಯಾಗುತ್ತದೆ ಎಂದು ಹೇಳಿದರು.

ನವದಂಪತಿಗಳಿಗೆ ಸಂಸದರ ಆಶೀರ್ವಾದ ಸಂಸದ ಜಿ. ಕುಮಾರ್ ನಾಯಕ ಹಾಗೂ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಶಾಂತಪ್ಪ ಅವರು ಶ್ರೀ ರಂಗನಾಥ ಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ನವವಧು-ವರ-ರಿಗೆ ಆಶೀರ್ವಾದ ಸಲ್ಲಿಸಿದರು. ಬಳಿಕ ಕೆಲಸದ ನಿಮಿತ್ತ ಕಾರ್ಯಕ್ರಮದಿಂದ ನಿರ್ಗಮಿಸಿದರು.

ಗಣ್ಯರ ಉಪಸ್ಥಿತಿ ಕಾರ್ಯಕ್ರಮದಲ್ಲಿ ಮಂದಕಲ್ ಮಠದ ಬಸವರಾಜ ರಾಜಗುರುಗಳು, ಮುಂಡರಗಿ ಶಿವಪ್ರಸಾದ ತಾತನವರು, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹನುಮಂತಿ ರಾಮಪಾಳಿ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ವೀರಣ್ಣ ಪಾಣಿ, ಬಸವರಾಜ ಪಂಪಾಪತಿ, ಇಂದಿರಾ ಆರ್., ಅಂಗನವಾಡಿ ಮೇಲ್ವಿಚಾರಕಿ ಶಾಂತಬಾಯಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಲಕ್ಷ್ಮೀ ಅಷ್ಟಗಿ, ಸಿಪಿಐ ಪುಂಡಲೀಕ, ಆರ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ರಾಜಶೇಖರ ನಾಯಕ, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯರಾದ ಮಹಾದೇವಪ್ಪ ಪಾಟೀಲ್, ವೀರಣ್ಣ ಬಳೆ, ಅಮರೇಶ್ ಪಾಟೀಲ್, ಬಸವರಾಜ ರಾಮುಲು, ಅನಂತರಾಜ ನಾಯಕ, ರಾಜಾರಾಮ ಭದ್ರಪ್ಪನಾಯಕ, ಶ್ರೀಧರ್ ದೇಸಾಯಿ, ಆನಂದ್ ಪಾಟೀಲ್, ಪ್ರಭಾಕರ್ ದೇಶಪಾಂಡೆ, ಅಮರೇಗೌಡ ಮಾಲಿ ಪಾಟೀಲ್, ಶರಣಗೌಡ ಪೊಲೀಸ್ ಪಾಟೀಲ್, ಗೋವಿಂದರಾಜ್ ತಿಂಪುರ್, ತಿಮ್ಮಣ್ಣ ನಾಯಕ ದಿವಾನ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಗೋವಿಂದ ಸೇವಾ ಸಮಿತಿಯ ಮುದುರಂಗಪ್ಪ ಕ್ಯಾದಿಗೇರಾ, ವೆಂಕೋಬ ಪೂಜಾರಿ, ಸಿದ್ದಪ್ಪ ಗುಮೇದಾರ, ಚಂದ್ರಕಾಂತ ಚಿಕ್ಕಲ್, ವೇಣುಗೋಪಾಲ ಗೌಡ, ತಿಮ್ಮರೆಡ್ಡಿ ಚಿತಲ್ ಕುಂಟ, ಶಿವನಗೌಡ ವಂದಲಿ, ಬಸನಗೌಡ ದೇಸಾಯಿ, ಶಿವನಗೌಡ ಕಕ್ಕಲದೊಡ್ಡಿ, ಹನುಮಗೌಡ ಮಾಲಿ ಪಾಟೀಲ್, ತಿಮ್ಮಣ್ಣ ದಿದಗಿ, ಮೌನೇಶ್ ನಾಯಕ, ಬಾಲಯ್ಯ ಯಾರಕಮಟ್ಟಿ, ಯಾಸಿನ್ ಮುಲ್ಲಾ, ರಂಗಪ್ಪ ಬಂಡಿ, ಸುರೇಶ್ ಗಲಗ್, ಚಂದಪ್ಪ ಬುದ್ದಿನ್ನಿ, ಯಂಕಪ್ಪ ಮುರಾಳ, ಅಮರೇಶ್ ಪೂಜಾರಿ, ಹುಸೇನಪ್ಪ ಚಲುವಾದಿ ಹಾಗೂ ಯಂಕಪ್ಪ ಲಿಂಗದಳ್ಳಿ ಸೇರಿದಂತೆ ಸಮಿತಿಯ ಪದಾಧಿಕಾರಿಗಳು ಭಾಗವಹಿಸಿದ್ದರು.

ಜಾಲಹಳ್ಳಿಯ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು. ಹನುಮಗೌಡ ಚಿಕ್ಕಲ್ ಸ್ವಾಗತಿಸಿದರು. ನಿವೃತ್ತ ಶಿಕ್ಷಕ ಶಿವಪುತ್ರಪ್ಪ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINT-ERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101